# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ -02 ಸಂಚಿಕೆ -239 | ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 | ಕೆಎ/ಎಸ್‌ಕೆ/ಸಿಟಿಎ-874/2024-2026 | ಚಿತ್ರದುರ್ಗ | ದಿನಾಂಕ:15-04-2025 ಮಂಗಳವಾರ | ಪುಟ: 4 | ಬೆಲೆ : ರೂ.2-00
Volume - 02 Issue - 239 | RNI No: KARKAN/2023/88462 | KA/SK/CTA-874/2024-2026 | Chitradurga | Date: 15-04-2025 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ರಾಜಬೀದಿಯಲ್ಲಿ ಅಕ್ಕ-ತಂಗಿ ಭೇಟಿಗೆ ಸಕಲ ಸಿದ್ಧತೆ 2

ಸಹಕಾರಿ ಬ್ಯಾಂಕ್‌ಗಳು ಬಡವರ ಪಾಲಿಗೆ ವರದಾನ: ಎಸ್ಜೆಬಿ 3

ಶೋಷಿತ ಸಮುದಾಯಗಳ ಪರವಾಗಿ ಹೋರಾಡಿದವರು ಡಾ: ಬಿ.ಆರ್.ಅಂಬೇಡ್ಕರ್ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ನಗರದ ಪ್ರಧಾನ ಅಂಚೆ ಕಚೇರಿಯಲ್ಲಿ ಅಬೆಂಡ್ಕರ್ ಜಯಂತಿ ಆಚರಣೆ



» ಚಿತ್ರದುರ್ಗ

ಡಾ.ಬಿಆರ್‌ಅಂಬೇಡ್ಕರ್‌ಅವರ134ನೇಜಯಂತಿಯ ಪ್ರಯುಕ್ತ ನಗರದ ಪ್ರಧಾನ ಅಂಚೆ ಕಛೇರಿಯಲ್ಲಿ ಜಯಂತಿಯನ್ನು ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಅಂಚೆಪಾಲಕರಾದ ಕೆ ದೇವರಾಜ್ ಅಧ್ಯಕ್ಷತೆ ವಹಿಸಿದ್ದರು ಟಿ ಎನ್ ಗೋಪಿನಾಥ್ ಎಂ ಮಂಜುನಾಥ್ ಹಾಗೂ ಆರ್.ಕರಿಸಿದ್ದಪ್ಪ ಮಾರುಕಟ್ಟೆ ಅಧಿಕಾರಿಗಳು ನಿಜಲಿಂಗಪ್ಪ, ಕಾರ್ಯದರ್ಶಿಗಳು ಮತ್ತು ಮಂಜುನಾಥ ಎನ್. ಶಂಭುಲಿಂಗಪ್ಪ ಎನ್. ಶ್ರೀನಿವಾಸ್ ಎನ್.ಎ. ಮಹೇಂದ್ರ ಕುಮಾರ್ ಭಾಗ್ಯಲಕ್ಷ್ಮಿ , ನಿಂಗಮ್ಮ, ಶಶಿಕಲಾ , ಮಧುಸೂದನ, ಭವ್ಯಶ್ರೀ ,ಬೀರಪ್ಪ ಜವಳೆರ್ ಹಾಗೂ ಎಲ್ಲಾ ಪ್ರಧಾನ ಅಂಚೆ ಕಚೇರಿ ಸಿಬ್ಬಂದಿಯವರು ಭಾಗವಹಿಸಿದ್ದರು.

### ಕಾಲುವೇಹಳ್ಳಿ ಆರೋಗ್ಯ ಇಲಾಖೆ ಅಧಿಕಾರಿ ಜೆ.ಎಚ್.ರಾಘವೇಂದ್ರಗೆ ರಾಜವೀರಮದಕರಿ ಪ್ರಶಸ್ತಿ.




» ಚಳ್ಳಕೆರೆ

ತಾಲ್ಲೂಕಿನ ಕಾಲುವೇಹಳ್ಳಿ ಗ್ರಾಮದ ಆರೋಗ್ಯ ಇಲಾಖೆಯ ಕಿರಿಯ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿ ಜೆ.ಎಚ್.ರಾಘವೇಂದ್ರರವರಿಗೆ ಆರೋಗ್ಯ ಇಲಾಖೆಯಲ್ಲಿ ಉತ್ತಮ ಸೇವೆಗಾಗಿ ರಾಜವೀರಮದಕರಿ ನಾಯಕ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲ್ಲೂಕಿನ ಮಹರ್ಷಿ ಶ್ರೀವಾಲ್ಮೀಕಿ ಗುರುಪೀಠ ಮತ್ತು ಕರ್ನಾಟಕ ಪರಿಶಿಷ್ಟ ಪಂಗಡ ವಾಲ್ಮೀಕಿ ನೌಕರರ ಒಕ್ಕೂಟ ಸಹಯೋಗದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ಸಮುದಾಯದ ಮುಖಂಡರಿಗೆ ರಾಜವೀರಮದಕರಿನಾಯಕ ಪ್ರಶಸ್ತಿ ನೀಡಲಾಗುತ್ತಿದ್ದು, ಪ್ರಸ್ತುತ ವರ್ಷ ಈ ಪ್ರಶಸ್ತಿಗೆ ಕಾಲುವೇಹಳ್ಳಿಯ ರಾಘವೇಂದ್ರ ಭಾಜನರಾಗಿದ್ದು, ಸೋಮವಾರ ನಡೆದ ಕಾರ್ಯಕ್ರಮದಲ್ಲಿ ಇವರಿಗೆ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಒಕ್ಕೂಟದ ರಾಜ್ಯಾಧ್ಯಕ್ಷ ಸಿ.ಮೋಹನ್‌ಕಿಶೋರ್, ಮದಕರಿವಂಶಸ್ಥ ರಾಜಮದಕರಿನಾಯಕ, ವಾಲ್ಮೀಕಿ ಗುರಪೀಠದಬ್ರಹ್ಮನಾಂದಗುರೂಜಿಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರು ಜಿಲ್ಲಾ ಪ್ರವಾಸ

» ದಾವಣಗೆರೆ

ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌಧರಿ ಅವರು ಏಪ್ರಿಲ್ 15, 16 ಮತ್ತು 17 ರಂದು ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಳ್ಳುವರು. ಏಪ್ರಿಲ್ 14 ರಂದು ರಾತ್ರಿ 8.30 ಕ್ಕೆ ಆಗಮಿಸಿ ವಾಸ್ತವ್ಯ ಮಾಡುವರು. ಏಪ್ರಿಲ್ 15 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಯದೇವ ವೃತ್ತದ ಬಳಿ ಬ್ರಾಹ್ಮಣ ಹಾಸ್ಟೆಲ್ ಮುಂಭಾಗದಲ್ಲಿ ದಲಿತ ಸಂರಕ್ಷಣಾ ಸಮಿತಿಯಿಂದ ಹಮ್ಮಿಕೊಂಡಿರುವ ಅಂಬೇಡ್ಕರ್ ಜಯಂತಿ ಕಾರ್ಯಕ್ರಮಲ್ಲಿ ಭಾಗವಹಿಸುವರು. ಮ.1.30 ಕ್ಕೆ ಆವರಗೊಳ್ಳ ಗ್ರಾಮ ವ್ಯಾಪ್ತಿಯ ಕೇಂದ್ರೀಯ ವಿದ್ಯಾಲಯ ಹಿಂಭಾಗದಲ್ಲಿ ವಾಸಿಸುತ್ತಿರುವ ಕುಟುಂಬಗಳ ಸ್ಥಳಕ್ಕೆ ಭೇಟಿ ನೀಡುವರು. ನಂತರ ಸಂಜೆ 5 ಗಂಟೆಗೆ ದಾವಣಗೆರೆ ವಿಶ್ವವಿದ್ಯಾನಿಲಯದ ಮಹಿಳಾ ವಸತಿ ನಿಲಯಕ್ಕೆ ಭೇಟಿ ನೀಡಿ ವಾಸ್ತವ್ಯ ಮಾಡುವರು.

---

**ಡಾ. ಅಂಬೇಡ್ಕರ್ ಜಯಂತಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಬಣ್ಣನೆ**

# ಶಿಕ್ಷಣ, ಸಂಘಟನೆ, ಹೋರಾಟ ಮಂತ್ರಗಳು ನವ ಭಾರತ ನಿರ್ಮಾಣಕ್ಕೆ ಮುನ್ನುಡಿಯಾಗಿವೆ

» ಚಿತ್ರದುರ್ಗ

ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ "ಶಿಕ್ಷಣ-ಸಂಘಟನೆ-ಹೋರಾಟ" ಎಂಬ ಮೂರು ಸಿದ್ಧಾಂತಗಳನ್ನು ನಾವೆಲ್ಲರೂ ಪಾಲಿಸಬೇಕಾದ ಜೀವನದ ಮಂತ್ರವಾಗಿವೆ. ಶಿಕ್ಷಣದಿಂದ ಜ್ಞಾನ, ಹೋರಾಟದಿಂದ ಹಕ್ಕುಗಳು, ಸಂಘಟನೆಯಿಂದ ಶಕ್ತಿ ಪಡೆದುಕೊಳ್ಳುವ ಮಾರ್ಗದಲ್ಲಿ ನಡೆಯುವುದು ನವ ಭಾರತ ನಿರ್ಮಾಣದ ಪ್ರಥಮ ಹೆಜ್ಜೆಯಾಗಿದೆ ಎಂದು ರಾಜ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರು ಹೇಳಿದರು.





ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಹಾಗೂ ನಗರಸಭೆ ಇವರ ಸಂಯುಕ್ತ ಆಶ್ರಯದಲ್ಲಿ ನಗರದ ತ.ರಾ.ಸು. ರಂಗಮಂದಿರದಲ್ಲಿ ಸೋಮವಾರ ಏರ್ಪಡಿಸಲಾದ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 134 ನೇ ಜನ್ಮ ದಿನಾಚರಣೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಡಾ. ಅಂಬೇಡ್ಕರ್ ಅವರು ಕೇವಲ ಸಮಾಜಸೇವಕರಲ್ಲ, ಅವರು ಭಾರತದ ಪುನರ್ ನಿರ್ಮಾಣಕ್ಕೆ ಕೊಡುಗೆ ನೀಡಿದ ಮಹಾತ್ಮ. ಶೋಷಿತರಿಗೆ ಧೈರ್ಯ, ಶಿಕ್ಷಣ, ಆತ್ಮಗೌರವ ಮತ್ತು ನ್ಯಾಯದ ಮಾರ್ಗವನ್ನು ತೋರಿದ ದಾರಿದೀಪ. ಅವರ ಜೀವನದ ಪ್ರಮುಖ ಕೊಂಡಿಯಾಗಿದ್ದು ಭಾರತದ ಸಂವಿಧಾನ. ಅವರು ಅಧ್ಯಕ್ಷರಾಗಿದ್ದ ಕರಡು ಸಮಿತಿಯ ಮಾರ್ಗದರ್ಶನದಲ್ಲಿ ರೂಪುಗೊಂಡ ನಮ್ಮ ಸಂವಿಧಾನವು ಸಮಾನತೆ, ಧರ್ಮನಿರಪೇಕ್ಷತೆ, ಸಾಮಾಜಿಕ ನ್ಯಾಯ ಮತ್ತು ವ್ಯಕ್ತಿಗತ ಹಕ್ಕುಗಳನ್ನು ನಮ್ಮೆಲ್ಲರಿಗೂ ನೀಡುವ ಪವಿತ್ರ ಗ್ರಂಥವಾಗಿದೆ.

12ನೇ ಶತಮಾನದಲ್ಲಿ ಈ ಭೂಮಿಯಲ್ಲಿ ಸಮಾನತೆಯ ಸಂದೇಶ ಸಾರಿ ಹೋಗಿದ್ದ ಮಹಾ ಮಾನವತಾವಾದಿ ಬಸವಣ್ಣ ಮತ್ತು 20ನೆಯ ಶತಮಾನದಲ್ಲಿ ಅದೇ ಸಂದೇಶವನ್ನು ಜಾರಿಗೊಳಿಸಿದ ಡಾ॥ ಬಾಬಾ ಸಾಹೇಬ ಅಂಬೇಡ್ಕರ್ ಇಬ್ಬರಲ್ಲೂ ಹಲವು ಸಾಮ್ಯತೆಗಳು ಕಾಣುತ್ತವೆ. ಇಬ್ಬರದು ಧ್ಯೆಯ, ಉದ್ದೇಶ ಒಂದೇ ಆಗಿತ್ತು, ಸಮಾಜದಲ್ಲಿ ಮೇಲು, ಕೀಳು ಎನ್ನುವ ಭಾವನೆ ಇರಬಾರದು, ಎಲ್ಲರಿಗೂ ಬದುಕಿನ ಹಕ್ಕು ಸಮಾನವಾಗಿ ಸಿಗಬೇಕು. ನೈಸರ್ಗಿಕ ಸಂಪನ್ಮೂಲಗಳ ಬಳಕೆಗೆ ಸಮಾನ ಅಧಿಕಾರವಿರಬೇಕು, ಎಲ್ಲಾ ಹಕ್ಕುಗಳು ಸಮಾನವಿರಬೇಕು ಎನ್ನುವ ಉದ್ದೇಶದೊಂದಿಗೆ ಅರಿವಿನ ಸಮಾಜ ನಿರ್ಮಿಸಿ, ಹೊಸ ಬೆಳಕನ್ನು ಕಾಣುವ ಹೊಸ ಕನಸು ಹೊತ್ತವರು ಡಾ. ಅಂಬೇಡ್ಕರ್ ಅವರು ಎಂದರು.

ಸಮಾಜದಲ್ಲಿನ ಅಸಮಾನತೆಗಾಗಿ ಅಂಬೇಡ್ಕರ್ ಅವರಿಗೆ ಬಹಳ ದೊಡ್ಡಮಟ್ಟದ ಅಸಮಾಧಾನವಿತ್ತು, ಆದರೆ ಅದಕ್ಕಾಗಿ ಅವರೆಂದೂ ತಾಳ್ಮೆ ಕಳೆದುಕೊಳ್ಳಲಿಲ್ಲ. ಅಹಿಂಸೆಯ ಮಾರ್ಗ ತುಳಿಯಲಿಲ್ಲ ಅತ್ಯಂತ ಸಮಾಧಾನದಿಂದಲೇ ಅರಿವು ಮೂಡಿಸಲು ಪ್ರಯತ್ನಿಸಿದರು, ಅದೇ ತತ್ವದ ಆಧಾರದ ಮೇಲೆ ಸಂವಿಧಾನವನ್ನು ರಚಿಸಿದರು. ಅವರ ಜೀವಿತದುದ್ದಕ್ಕೂ ಯಾರನ್ನೂ ದ್ವೇಷಿಸಲಿಲ್ಲ, ಯಾರ ಹಕ್ಕುಗಳನ್ನು ಅಧಿಕಾರವನ್ನು, ಅವರು ಕಸಿದುಕೊಳ್ಳಲು ಬಯಸಿರಲಿಲ್ಲ. ಮನುಷ್ಯನಾಗಿ ಹುಟ್ಟಿದವರು ಹೇಗೆ ಬದುಕಬಹುದು ಎಂದು ತೋರಿಸುವ ಮೂಲಕ ಇಡೀ ಮಾನವ ಕುಲಕ್ಕೆ ಆದರ್ಶರಾದರು. ಕಾನೂನು ತಜ್ಞರಾಗಿ ಸಮಾಜ ಸುಧಾರಕರಾಗಿ ಅರ್ಥ ಶಾಸ್ತ್ರಜ್ಞರಾಗಿ, ಪತ್ರಕರ್ತರಾಗಿ, ತತ್ವಜ್ಞಾನಿಯಾಗಿ, ಸಾಹಿತಿಯಾಗಿ ತಮ್ಮ ಇರುವಿಕೆಯನ್ನು ತೋರ್ಪಡಿಸಿದರು. ಹಾಗಾಗಿ ಅವರ ಹೆಸರೇ ನಮಗೆಲ್ಲಾ ಸ್ಫೂರ್ತಿ, ಸಾಧನೆಗೆ ಪ್ರೇರಣೆ, ಅವರ ಬದುಕು ತತ್ವ ಆದರ್ಶಗಳು ನಮ್ಮೆಲ್ಲರ ಪಾಲಿಗೆ ಸರ್ವಕಾಲಿಕ ಮಾರ್ಗದರ್ಶಕ. ಸಮಾನತೆಯಿಂದಲೆ ಪ್ರಗತಿ ಎನ್ನುವುದು ಅವರ ಪರಮೋಚ್ಚ ನಂಬಿಕೆಯಾಗಿತ್ತು ಎಂದರು.

ಅಂಬೇಡ್ಕರ್ ಅವರ ಕನಸಿನಂತೆ, ಎಲ್ಲಾ ಹಂತಗಳಲ್ಲಿಯೂ ಶಿಕ್ಷಣ-ಸಮಾನತೆ ಯನ್ನು ನೀಡುವಲ್ಲಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರ ಕಂಕಣ ಬದ್ಧವಾಗಿದೆ. ಅಂಬೇಡ್ಕರ್ ಜಯಂತಿ ಎನ್ನುವುದು ಕೇವಲ ಪುಷ್ಪಾರ್ಚನೆಗೆ ಸೀಮಿತವಾಗಬಾರದು. ಇದು ಪ್ರತಿಜ್ಞಾ ದಿನವಾಗಬೇಕು, ನಾವು ಜಾತಿಯ ಹೆಸರಿನಲ್ಲಿ ನಡೆಯುವ ಯಾವುದೇ ಹಿಂಸೆಯನ್ನು ವಿರೋಧಿಸೋಣ. ಎಲ್ಲ ಮಕ್ಕಳಿಗೂ ಸಮಾನ ಶಿಕ್ಷಣ, ಮಹಿಳೆಯರಿಗೆ ಗೌರವ, ದಲಿತರಿಗೆ ಸವಲತ್ತು, ಪರಿಶ್ರಮಿಕರಿಗೆ ಪರಿಗಣನೆ, ಎಲ್ಲ ವರ್ಗದ ಜನತೆಗೆ ಸನ್ಮಾನ, ಈ ಎಲ್ಲವನ್ನು ನಾವು ಕಲ್ಪಿಸೋಣ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಆಶಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, 1927 ರಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಧೃಢ ನಿರ್ಧಾರ ಕೈಗೊಂಡು ಮನಸ್ಮೃತಿ ಎನ್ನುವ ಅಲಿಖಿತ ಸಂವಿಧಾನವನ್ನು ಸುಟ್ಟು ಹಾಕಿದರು. ವಿದ್ಯಾಭ್ಯಾಸದಿಂದ ಅಂಬೇಡ್ಕರ್ ಗಳಿಸಿದ ವಿದ್ವತ್ ಇಂತಹ ಧೃಡ ನಿರ್ಧಾರ ಕೈಗೊಳ್ಳಲು ಕಾರಣವಾಯಿತು. ಬಹಳಷ್ಟು ಜನರು ಇದನ್ನು ವಿರೋಧಿಸಿದರು. ದೇಶದ ಸಂವಿಧಾನ ರಚನೆ ಮಾಡಿ, ದೇಶದಲ್ಲಿ ಜಾರಿಯಾದ ಮೇಲೂ ಅಂಬೇಡ್ಕರ್ ರಚಿಸಿದ ಸಂವಿಧಾನ ಒಪ್ಪದಂತೆ ವಿರೋಧಿಸಿ ಅಂದಿನ ಕಾಲದಲ್ಲಿ ಚಳುವಳಿಯನ್ನು ಸಹ ನಡೆಸಲಾಯಿತು. ಇಂದಿಗೂ ಸಂವಿಧಾನವನ್ನು ಬದಲಾವಣೆ ಮಾಡುವ ಹುನ್ನಾರ ದೇಶದಲ್ಲಿ ನಡೆಯುತ್ತಿದೆ. ಸಂವಿಧಾನವನ್ನು ರಕ್ಷಿಸುವ ಜವಬ್ದಾರಿ ನಮ್ಮೆಲ್ಲರ ಮೇಲಿದೆ. ಸಂವಿಧಾನ ರಚಿಸಿ ಪ್ರಜಾಪ್ರಭುತ್ವಕ್ಕೆ ಅಡಿಪಾಯ ಹಾಕಿದವರು ಡಾ.ಬಿ.ಆರ್.ಅಂಬೇಡ್ಕರ್, ದೇಶದಲ್ಲಿ ಸಾಮಾಜಿಕ, ಆರ್ಥಿಕ ಹಾಗೂ ರಾಜಯಕೀಯ ಸಮಾನತೆ ಮೂಡಬೇಕು ಎನ್ನುವುದು ಅವರ ಆಶಯವಾಗಿತ್ತು. ಇಂದು ಮಹಿಳೆಯರಿಗೆ ಸ್ವಾತಂತ್ರ್ಯ ದೊರಕಲು ಬಾಬಾ ಸಾಹೇಬ್ ಅಂಬೇಡ್ಕರ್ ಕಾರಣವಾಗಿದ್ದಾರೆ. ಭಾರತ ದೇಶ ಇಂದು ಆಧುನಿಕವಾಗಿ ಪ್ರಗತಿ ಹೊಂದಲು ಅಂಬೇಡ್ಕರ್ ಅವರ ಕೊಡುಗೆ ಮಹತ್ವದ್ದಾಗಿದೆ. ರಾಜ್ಯ ಸರ್ಕಾರವು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದವರಿಗೆ ಗುತ್ತಿಗೆಯಲ್ಲೂ ಮೀಸಲಾತಿ ನೀಡಿದೆ. ಅಂಬೇಡ್ಕರ್ ಅವರ ಆಶಯ ಈಡೇರಿಸುವಲ್ಲಿ ಸರ್ಕಾರ ಕಾರ್ಯನಿರ್ವಹಿಸುತ್ತಿದೆ ಎಂದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್ ಮಾತನಾಡಿ, ಅಂಬೇಡ್ಕರ್ ನೀಡಿದ ಸಂವಿಧಾನದಿಂದಲೇ ಇಂದು ನಾವೆಲ್ಲರೂ ಜಾತಿ ಪದ್ಧತಿ ಮೀರಿ, ವಿದ್ಯಾಭ್ಯಾಸ ಹೊಂದಿ ಉನ್ನತ ಸ್ಥಾನಗಳನ್ನು ಅಲಂಕರಿಸುವಂತಾಗಿದೆ. ಇಡೀ ದೇಶವನ್ನು ಒಗ್ಗೂಡಿಸಿ ಮುನ್ನಡೆಸುವ ಅಂಬೇಡ್ಕರ್ ರಚಿಸಿದ ಶಕ್ತಿ ಸಂವಿಧಾನಕ್ಕೆ ಇದೆ ಎಂದರು. ಚಳ್ಳಕೆರೆ ಕೋಟೆ ಬೋರಮ್ಮ ಪಥಮ ದರ್ಜೆ ಕಾಲೇಜಿನ ಅರ್ಥಶಾಸ್ತ್ರ ಪ್ರಾಧ್ಯಾಪಕ ಸಂಜೀವ್ ಕುಮಾರ್ ಪೋತೆ ಮಾತನಾಡಿ, ಜಾತಿ ಪದ್ಧತಿಯ ಕಷ್ಟ ಕಾರ್ಪಣ್ಯಗಳನ್ನು ಮೀರಿ ಅಂಬೇಡ್ಕರ್ ಸಾಧನೆ ಮಾಡಿದ್ದಾರೆ. ಸೈದ್ಧಾಂತಿಕವಾಗಿ ಅಂಬೇಡ್ಕರ್ ಮನುವಾದವನ್ನು ವಿರೋಧಿಸಿದ್ದಾರೆ. ಯಾವುದೇ ರಾಜಕೀಯ ಪಕ್ಷಗಳ ಬಗ್ಗೆ ಅಂಬೇಡ್ಕರ್ ಎಂದೂ ವಿರೋಧ ವ್ಯಕ್ತ ಪಡಿಸಿರಲಿಲ್ಲ. ಅಂಬೇಡ್ಕರ್ ವಿಶ್ವದ ಅತ್ಯುತನ್ನತ ಅರ್ಥಶಾಸ್ತ್ರಜ್ಞರಲ್ಲಿ ಒಬ್ಬರಾಗಿದ್ದಾರೆ. ಅವರ ಸಲಹೆ ಮೇರೆಗೆ ಬ್ರಿಟೀಷ್ ಆಡಳಿತದಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್ ಸ್ಥಾಪಿಸಲಾಯಿತು. ಕಾರ್ಮಿಕ ಸಚಿವರಾಗಿ ಕಾರ್ಮಿಕರಿಗೆ 8 ಗಂಟೆಗಳ ಕೆಲಸದ ಅವಧಿ ನಿಗಧಿ, ಐ.ಎಸ್.ಐ ಸೌಲಭ್ಯ, ಮಹಿಳಾ ಕಾರ್ಮಿಕರಿಗೆ ಹೆರಿಗೆ ಪೂರ್ವ ಹಾಗೂ ನಂತರದಲ್ಲಿ ರಜೆ ಸೌಲಭ್ಯಗಳನ್ನು ಕಲ್ಪಿಸಿದರು. ಉತ್ತಮ ದೂರದರ್ಶಿತ್ವ ಹೊಂದಿದ್ದ ಅಂಬೇಡ್ಕರ್ ದಾಮೋದರ್ ಕಣಿವೆ ನೀರಾವರಿ ಯೋಜನೆ, ಹಿರಾಕುಡ್ ಅಣೆಕಟ್ಟು ನಿರ್ಮಾತೃವಾಗಿದ್ದಾರೆ. ಅಂಬೇಡ್ಕರ್ ಸಾಕಷ್ಟು ಹೋರಾಟಗಳನ್ನು ನಡೆಸಿ ವಿಮೋಚನಾ ಎಂಬ ರಥವನ್ನು ಇಲ್ಲಿಯವರೆಗೂ ತಂದು ನಿಲ್ಲಿಸಿದ್ದಾರೆ. ಈ ವಿಮೋಚನಾ ರಥವನ್ನು ನಾವೆಲ್ಲರೂ ಮುಂದೆ ತೆಗೆದುಕೊಂಡು ಹೋಗಬೇಕಿದೆ ಎಂದು ಹೇಳಿದರು. ಕಾರ್ಯಕ್ರಮಕ್ಕೂ ಮುನ್ನ ರಂಗಮಂದಿರದಲ್ಲಿ ಡಾ. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್, ಶಾಸಕ ವೀರೇಂದ್ರ ಪಪ್ಪಿ ಸೇರಿದಂತೆ ಎಲ್ಲ ಗಣ್ಯಮಾನ್ಯರು ಪುಷ್ಪನಮನ ಸಲ್ಲಿಸಿ ಗೌರವ ಸಮರ್ಪಿಸಿದರು. ಡಾ. ಅಂಬೇಡ್ಕರ್ ಜಯಂತಿ ಅಂಗವಾಗಿ ಭಾರತ ಸಂವಿಧಾನದ ಪೀಠಿಕೆಯನ್ನು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಸಮಾರಂಭದಲ್ಲಿ ಪಾಲ್ಗೊಂಡಿದ್ದ ಎಲ್ಲರಿಗೂ ಇದೇ ಸಂದರ್ಭ ದಲ್ಲಿ ಬೋಧಿಸಿದರು

ಪುಟ 2

---

## ಪ್ರಮುಖ ಸುದ್ದಿ

**ಅಂಬೇಡ್ಕರ್, ಡಾ.ಬಾಬುಜಗಜೀವನರಾಮ್‌ರವರ ಚಿಂತನೆ ಮತ್ತು ಹೋರಾಟ ಎಲ್ಲರಿಗೂ ಸ್ಫೂರ್ತಿದಾಯಕ: ಟಿ.ರಘುಮೂರ್ತಿ**

# ಇತಿಹಾಸದಲ್ಲಿ ಇಬ್ಬರೂ ಅಗ್ರಗಣ್ಯ ನಾಯಕರ ಹೆಸರು ಶಾಶ್ವತ

» ಚಳ್ಳಕೆರೆ

ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್, ಹಸಿರುಕ್ರಾಂತಿಹರಿಕಾರ ಡಾ.ಬಾಬುಜಗಜೀವನರಾವ್ ತಮ್ಮದೇಯಾದ ವಿಶೇಷ ಸಾಧನೆಯಮೂಲಕ ವಿಶ್ವದ ಗಮನಸೆಳೆದಿದ್ದಾರೆ. ಶೋಷಿತ, ದೌರ್ಜನ್ಯಕ್ಕೀಡಾದ, ಅವಮಾನಕ್ಕೊಳಗಾದ ಜನಾಂಗಗಳಿಗೆ ಕಾಯಕಲ್ಪವನ್ನು ನೀಡಿದ ಕೀರ್ತಿ ಈ ಇಬ್ಬರೂ ಮಹಾನಾಯಕರದ್ದು. ಇಬ್ಬರೂ ಮಹಾನಾಯಕರನ್ನು ನಾವು ಕಲಿಯುಗದ ಸೂರ್ಯವೆಂದು ಕರೆಯಬಹುದಾಗಿದೆ. ಅವರು ಮಾಡಿದ ಸಾಧನೆ ಇತಿಹಾಸದಲ್ಲಿ ಅಚ್ಚಳಿಯದೆ ಸದಾಕಾಲ ಉಳಿಯಲಿದೆ ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಸೋಮವಾರ ತಾಲ್ಲೂಕು ಕಚೇರಿ ಆವರಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ತಾಲ್ಲೂಕುಪಂಚಾಯಿತಿ, ಸಮಾಜಕಲ್ಯಾಣ ಇಲಾಖೆ, ನಗರಸಭೆ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಡಾ.ಬಿ.ಆರ್.ಅಂಬೇಡ್ಕರ್‌ರವರ 134ನೇ, ಬಾಬುಜಗಜೀವನರಾಮ್‌ರವರ 118ನೇ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ, ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರಸ್ತುತ ರಾಜಕೀಯದಲ್ಲಿ ಇಬ್ಬರೂ ಮಹಾನ್‌ನಾಯಕರ ಆದರ್ಶಗಳನ್ನು ಅಳವಡಿಸಿಕೊಂಡರೆ ಮಾತ್ರ ರಾಜಕೀಯ ಕ್ಷೇತ್ರದ ಮೌಲ್ಯ ಹೆಚ್ಚುತ್ತದೆ. ಎಂದಿಗೂ ಅಧಿಕಾರಕ್ಕಾಗಿ ಹಾತುವರೆಯದೆ ಈ ಮಹಾನ್‌ನಾಯಕರ ಹೋರಾಟದ ಬದುಕು ಎಲ್ಲರಿಗೂ ಸ್ಫೂರ್ತಿ ಎಂದರು.



ಇದೇ ಸಂದರ್ಭದಲ್ಲಿ ಆಧುನಿಕ ಭಾರತ ನಿರ್ಮಾಣದಲ್ಲಿ ಅಂಬೇಡ್ಕರ್ ಪಾತ್ರ ಪ್ರಬಂಧಸ್ಪರ್ಧೆಯಲ್ಲಿ ವಿಜೇತರಾದ 6 ವಿದ್ಯಾರ್ಥಿಗಳಿಗೆ ದಲಿತ ಸಂಘಟನೆಗಳ ಹೋರಾಟದಲ್ಲಿಸಕ್ರಿಯವಾಗಿಭಾಗವಹಿಸಿದ ದಲಿತಸಮಾಜದ ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ಮಹಾನೀಯರನ್ನು ಶಾಸಕರು ಗೌರವಿಸಿದರು. ಸಾಮಾಜಿಕ ಕ್ಷೇತ್ರದಲ್ಲಿ ವಕೀಲ ಬಿ.ಮಲ್ಲಿಕಾರ್ಜುನ್, ಡಿ.ದ್ಯಾಮಯ್ಯ, ನಿಜಲಿಂಗಪ್ಪ, ಪಿ.ರೇಣುಕಮ್ಮ, ಎಚ್.ಎಸ್.ಸೈಯದ್, ಆರ್.ಟಿ.ಸ್ವಾಮಿ, ವೈ.ಟಿ.ಸ್ವಾಮಿ, ಭೀಮನಕೆರೆ ಶಿವಮೂರ್ತಿ, ಆರ್.ಡಿ.ಮಂಜುನಾಥ, ವೈ. ಕಾಂತರಾಜ್, ದ್ಯಾವರನಹಳ್ಳಿತಿಪ್ಪೇಸ್ವಾಮಿ, ಸುಶೀಲಮ್ಮ, ಸಿ.ಜೆ.ಜಯಕುಮಾರ್, ಚನ್ನಿಗರಾಯ, ಸಾಹಿತ್ಯ ಕ್ಷೇತ್ರದಲ್ಲಿ ಜಡೇಕುಂಟೆಮಂಜುನಾಥ, ಮೋದೂರು ತೇಜ, ಕೊರ್ಲಕುಂಟೆತಿಪ್ಪೇಸ್ವಾಮಿಯವರನು ಅಭಿನಂದಿಸಲಾಯಿತು.

ಬಿ.ಆರ್.ಅಂಬೇಡ್ಕರ್ ಮತ್ತು ಬಾಬುಜಗಜೀವರಾವ್‌ರವರ ಬಗ್ಗೆ ಕುರಿತು ಮಾತನಾಡಿದ ಮಲ್ಲಿಕಾರ್ಜುನಹರಸುಳ್ಳಿ, ಅಂಬೇಡ್ಕರ್ ಮತ್ತು ಬಾಬುಜಗಜೀವನರಾಮ್‌ರವರ ತತ್ವ, ಸಿದ್ಧಾಂತಗಳು ಪ್ರತಿಯೊಬ್ಬ ವ್ಯಕ್ತಿಯ ಬದಕನ್ನು ಸಾರ್ಥಕಗೊಳಿಸುವ ಎಲ್ಲಾ ಅಂಶಗಳಿಗೆ ಎಂದರು. ಸಂಶೋಧಕ ನವೀನ್‌ಪೂಜರಾಹಳ್ಳಿ ಮಾತನಾಡಿ, ಅಂಬೇಡ್ಕರ್ ಮತ್ತು ಬಾಬುಜಗಜೀವನರಾಮ್‌ರವರ ಪ್ರತಿನಿತ್ಯದ ಹೋರಾಟದ ಬದುಕಿನಿಂದ ನಾವೆಲ್ಲರೂ ಉತ್ತಮ ಹಾದಿಯಲ್ಲಿ ನಡೆದಿದ್ದೇವೆ. ಇವರ ಸಾಧನೆ ಬಗ್ಗೆ ವಿಶ್ವವೇ ಹೆಮ್ಮೆ ಪಡುತ್ತಿದೆ ಎಂದರು.

ಇಬ್ಬರೂ ಮಹಾನ್‌ನಾಯಕ ಸಾಧನೆ ಕುರಿತು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಬಿ.ಪಿ.ಪ್ರಕಾಶ್‌ಮೂರ್ತಿ, ಜಡೇಕುಂಟೆಮಂಜುನಾಥ, ಜಿ.ಟಿ.ವೀರಭದ್ರಸ್ವಾಮಿ, ನಗರಸಭೆ ಅಧ್ಯಕ್ಷೆ ಆರ್.ಮಂಜುಳಾಪ್ರಸನ್ನಕುಮಾರ್, ಕೆ.ವೀರಭದ್ರಸ್ವಾಮಿ ಮುಂತಾದವರು ಮಾತನಾಡಿದರು.

ಪುಟ 2

ಫಾಸ್ಟ್ ನ್ಯೂಸ್

## ಶಿಕ್ಷಣ, ಸಂಘಟನೆ, ಹೋರಾಟ ಮಂತ್ರಗಳು ನವ ಭಾರತ ನಿರ್ಮಾಣಕ್ಕೆ ಮುನ್ನುಡಿಯಾಗಿವೆ

» ಮೊದಲ ಪುಟದಿಂದ

ವಿವಿಧ ಸಂಘಟನೆಗಳ ಮೂಲಕ ಸಮಾಜದ ಏಳಿಗೆಗಾಗಿ ಹೋರಾಟ ನಡೆಸಿ, ಜನಸೇವೆಗೈದ ಪರಿಶಿಷ್ಟ ಜಾತಿಯ ವಿವಿಧ ಮುಖಂಡರುಗಳನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಿ ಗೌರವಿಸಲಾಯಿತು. ಹಾಗೂ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ವಾರ್ಷಿಕ ಪರೀಕ್ಷೆಗಳಲ್ಲಿ ಜಿಲ್ಲಾ ಮಟ್ಟದಲ್ಲಿ ಅತಿ ಹೆಚ್ಚು ಅಂಕಗಳಿಸಿ ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ಕೂಡ ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ಸಮಾರಂಭದಲ್ಲಿ ನಗರಸಭೆ ಅಧ್ಯಕ್ಷೆ ಸುಮಿತಾ ರಾಘವೇಂದ್ರ, ಜಿಲ್ಲಾಧಿಕಾರಿ ಟಿ. ವೆಂಕಟೇಶ್, ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ ಬಂಡಾರು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಶಿವಣ್ಣ, ಉಪಾಧ್ಯಕ್ಷ ಡಿ.ಎನ್. ಮೈಲಾರಪ್ಪ, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನ್, ನಗರಸಭೆ ಪೌರಾಯುಕ್ತೆ ರೇಣುಕಾ, ಸಮಾಜ ಕಲ್ಯಾಣ ಇಲಾಖೆ ಜಂಟಿನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಲಿಡ್ಕರ್ ಮಾಜಿ ಅಧ್ಯಕ್ಷ ಶಂಕರ್, ಮುಖಂಡರುಗಳಾದ ರಾಜಣ್ಣ, ನಿರಂಜನಮೂರ್ತಿ, ಬಾಳೆಕಾಯಿ ಶ್ರೀನಿವಾಸ್, ಸಿ.ಹೆಚ್. ಮಂಜುನಾಥ್, ತಿಪ್ಪೇಸ್ವಾಮಿ, ಹೆಚ್. ಮಹಾಂತೇಶ್, ಕೆ.ಟಿ. ಶಿವಕುಮಾರ್, ವೈ. ರಾಜಣ್ಣ ತುರುವನೂರು, ಎಂ. ಶಿವಮೂರ್ತಿ, ಪಾಂಡುರಂಗಪ್ಪ, ಕೈನಡು ಚಂದ್ರಣ್ಣ, ನಾಗಭೂಷಣ್, ನರಸಿಂಹರಾಜು, ಸೋಮಶೇಖರ್, ಸಮೀವುಲ್ಲಾ ಮುಂತಾದವರು ಪಾಲ್ಗೊಂಡಿದ್ದರು.

## ಇತಿಹಾಸದಲ್ಲಿ ಇಬ್ಬರೂ ಅಗ್ರಗಣ್ಯ ನಾಯಕರ ಹೆಸರು ಶಾಶ್ವತ

» ಮೊದಲ ಪುಟದಿಂದ

ತಹಶೀಲ್ದಾರ್ ರೇಹಾನ್‌ಪಾಷ ಪ್ರಾಸ್ತಾವಿಕವಾಗಿ ಮಾತನಾಡಿ, ಶೋಷಿತ ಸಮುದಾಯದ ಆಶಾಕಿರಣವಾಗಿ ಇಬ್ಬರೂ ಮಹಾನ್‌ನಾಯಕರು ಹೊರಹೊಮ್ಮಿದ್ಧಾರೆ. ಸಮಾಜದಲ್ಲಿ ಆಳಾವಾಗಿ ಬೇರೂರಿದ್ದ ಜಾತಿಪದ್ದತಿ, ಅಸಮಾನತೆ, ದೌರ್ಜನ್ಯವನ್ನು ತೊಡೆದು ಹಾಕಲು ಶ್ರಮಿಸಿದ ಮಹಾನ್‌ನಾಯಕರು ಎಂದರು. ಕಾರ್ಯಕ್ರಮದಲ್ಲಿ ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಸಿ.ಟಿ.ವೀರೇಶ್, ಗ್ಯಾರಂಟಿ ಸಮಿತಿ ತಾಲ್ಲೂಕು ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ಜಿಲ್ಲಾ ಪಂಚಾಯಿತಿ ಕೆಡಿಪಿ ಸದಸ್ಯ ಓ.ರಂಗಸ್ವಾಮಿ, ತಾಲ್ಲೂಕು ಪಂಚಾಯಿತಿ ಕೆಪಿಡಿ ಸದಸ್ಯರಾದ ಎಂ.ರಮೇಶ್, ನೇತ್ರಾವತಿ, ನಗರಸಭಾ ಸದಸ್ಯರಾದ ಎಂ.ಜೆ.ರಾಘವೇಂದ್ರ, ರಮೇಶ್‌ಗೌಡ, ಜಯಲಕ್ಷ್ಮಿ,ವಿರೂಪಾಕ್ಷಿ, ಚಳ್ಳಕೆರೆಯಪ್ಪ, ಸಮರ್ಥರಾಯ, ಟಿ.ವಿಜಯಕುಮಾರ್, ನಾಮಿನಿ ಸದಸ್ಯರಾದ ನೇತಾಜಿಪ್ರಸನ್ನ, ವೀರಭದ್ರಪ್ಪ, ನಟರಾಜ್, ಅನ್ವರ್‌ಮಾಸ್ಟರ್, ಬಡಗಿಪಾಪಣ್ಣ, ಇಒ ಎಚ್.ಶಶಿಧರ, ಪೌರಾಯುಕ್ತ ಜಗರೆಡ್ಡಿ, ಬಿಇಒ ಕೆ.ಎಸ್.ಸುರೇಶ್, ಡಿವೈಎಸ್ಪಿ ಟಿ.ಬಿ.ರಾಜಣ್ಣ, ಸಮಾಜಕಲ್ಯಾಣಾಧಿಕಾರಿ ಜೆ.ದೇವಲಾನಾಯ್ಕ, ತೋಟಗಾರಿಕೆ ಅಧಿಕಾರಿ ವಿರೂಪಾಕ್ಷಪ್ಪ, ಪಶುವೈದ್ಯಾಧಿಕಾರಿ ರೇವಣ್ಣ, ಕೃಷಿ ಅಧಿಕಾರಿ ಜೆ.ಅಶೋಕ್, ಸಿಡಿಪಿಒ ಹರಿಪ್ರಸಾದ, ಎಸ್ಟಿ ಕಲ್ಯಾಣಧಿಕಾರಿ ಶಿವರಾಜ್, ಬೆಸ್ಕಾಂ ಅಧಿಕಾರಿ ಶಿವಪ್ರಸಾದ್, ಬಿಸಿಎಂ ಅಧಿಕಾರಿ ರಮೇಶ್ ಮುಂತಾದವರು ಭಾಗವಹಿಸಿದ್ದರು.

## ನಿವೃತ್ತ ಇಂಜಿನಿಯರ್ ಕೆ.ಸಿ.ನಿಂಗಪ್ಪ ನಿಧನ

» ಹೊಸದುರ್ಗ

ಪಟ್ಟಣದ ವಿದ್ಯಾನಗರ ನಿವಾಸಿ ನಿವೃತ್ತ ಇಂಜಿನಿಯರ್ ಕೆ.ಸಿ.ನಿಂಗಪ್ಪ (85) ಸೋಮವಾರ ಮುಂಜಾನೆ ಹೃದಯಾಘಾತದಿಂದ ನಿಧನ ಹೊಂದಿದರು.ಭಾನುವಾರ ರಾತ್ರಿ ಎದೆ ನೋವು ಕಾಣಿಸಿಕೊಂಡಅವರನ್ನಬೆಂಗಳೂರಿನಆಸ್ಪ್ರಾಆಸ್ಪತ್ರೆಗೆ ದಾಖಲಿಸಲಾಗಿತ್ತು ಅದರೆ ಚಿಕಿತ್ಸೆ ಫಲಕಾರಿಯಾಗದೆ ಸೋಮವಾರ ಮುಂಜಾನೆ ಸಾವನ್ನಪ್ಪಿದ್ದಾರೆ. ಮೃತರಿಗೆ ಪತ್ನಿ ಇಬ್ಬರು ಪುತ್ರರು,ಇಬ್ಬರು ಪುತ್ರಿಯರು ಹಾಗೂ ಅಪಾರ ಬಂದು ಬಳಗವಿದ್ದು ಕೆ.ಸಿ.ನಿಂಗಪ್ಪನವರು ಮೂಲತಹ ಹೊಸದುರ್ಗ ತಾಲೂಕಿನ ಕೆಂಕೆರೆ ಗ್ರಾಮದವರಾಗಿದ್ದು ಇವರು ಚಿತ್ರದುರ್ಗ ಜಿಲ್ಲಾ ಪರಿಷತ್ತಿನಲ್ಲಿ ಇಂಜಿನಿಯರ್ ಆಗಿ ಕರ್ತವ್ಯ ನಿರ್ವಹಿಸಿದ್ದ ಇವರು ಚಿತ್ರದುರ್ಗ ಹಿರಿಯೂರು,ಭದ್ರಾವತಿ ಮುಂತಾದ ಕಡೆಗಳಲ್ಲಿ ಎಇಇ ಆಗಿ ಕರ್ತವ್ಯ ನಿರ್ವಹಿಸಿ ಹೊಸದುರ್ಗದಲ್ಲಿ ನಿವೃತ್ತ ಹೊಂದಿದ್ದರು. ನಿವೃತ್ತಿ ಹೊಂದಿದ ನಂತರ ಕಾಂಗ್ರೆಸ್ ಪಕ್ಷದಲ್ಲಿ ನಿಷ್ಠಾವಂತ ಕಾರ್ಯಕರ್ತರಾಗಿ ಗುರುತಿಸಿಕೋಂಡು ಪಕ್ಷದ ಮುಖಂಡರಾಗಿ ಕೆಲಸ ನಿರ್ವಹಿಸುತ್ತಿದ್ದರು ಹಾಲಿ ಶಾಸಕ ಬಿ.ಜಿ.ಗೋವಿಂದಪ್ಪನವರ ಆಪ್ತರಾಗಿದ್ದ ಇವರು ತಾಲೂಕಿನ ಅಭಿವೃದ್ದಿಯ ಪ್ರಗತಿಪರ ಕ್ರೀಯಾಶೀಲ ಯೋಜನೆಗಳ ಕಾರ್ಯಗಳಲ್ಲಿ ತೋಡಗಿಕೊಂಡು ರಸ್ತೆ ನಿರ್ಮಾಣ ಸೇರಿದಂತೆ ಅತ್ಯಂತ ಪ್ರಮುಖ ಕಾಮಗಾರಿಗಳ ನಿರ್ಮಾಣಕ್ಕೆ ಯೋಜನೆಯನ್ನ ರೂಪಿಸುತ್ತಿದ್ದರು. ಇವರ ಓರ್ವ ಪುತ್ರ ಹೊರ ದೇಶದಲ್ಲಿ ಇರುವ ಕಾರಣ ಮಂಗಳವಾರ ಮುಂಜಾನೆ ವಿಮಾನದಲ್ಲಿ ಬೆಂಗಳೂರಿಗೆ ಬಂದು ಅಲ್ಲಿಂದ ಹೊಸದುರ್ಗ ಬರುವ ಹಿನ್ನೆಲೆಯಲ್ಲಿ ಇವರ ಅಂತ್ಯಕ್ರಿಯೆಯನ್ನ ಮಂಗಳವಾರ ಸಂಜೆ ಅವರ ಸ್ವಗ್ರಾಮವಾದ ಕೆಂಕೆರೆ ಗ್ರಾಮದಲ್ಲಿ ನಡೆಲಾಗುವುದು ಎಂದು ಅವರ ಕುಟುಂಬ ವರ್ಗದವರು ತಿಳಿಸಿದ್ದಾರೆ.

### ಜನಮನ ಸೆಳೆದ ಆಕರ್ಷಕ ಸ್ತಬ್ಧ ಚಿತ್ರಗಳ ಮೆರವಣಿಗೆ

# ಕೋಟೆ ನಾಡಿನಲ್ಲಿ ವಿಜೃಂಭಣೆಯ ಅಂಬೇಡ್ಕರ್ ಜಯಂತಿ

» ಚಿತ್ರದುರ್ಗ

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 134ನೇ ಜನ್ಮ ದಿನಾಚರಣೆ ಕೋಟೆನಾಡು ಚಿತ್ರದುರ್ಗ ನಗರದಲ್ಲಿ ವಿಜೃಂಭಣೆಯಿಂದ ಜರುಗಿತು. ಜಯಂತಿ ಅಂಗವಾಗಿ ನಗರದ ಕನಕದಾಸ ವೃತ್ತದಿಂದ ತರಾಸು ರಂಗಮಂದಿರದವರೆಗೆ ಆಯೋಜಿಸಲಾದ ಡಾ. ಬಿ.ಆರ್. ಅಂಬೇಡ್ಕರ್ ಭಾಚಿತ್ರದೊಂದಿಗಿನ ವಿವಿಧ ಇಲಾಖೆಗಳ ಆಕರ್ಷಕ ಸ್ತಬಚಿತ್ರ ಮೆರವಣಿಗೆ ಜನಮನ ಸೆಳೆಯಿತು.



ವಿಧಾನಪರಿಷತ್‌ಶಾಸಕಕೆ.ಎಸ್.ನವೀನ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ನಗರ ಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್.ರಾಘವೇಂದ್ರ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಜಿಲ್ಲಾ ಗ್ಯಾರೆಂಟಿ ಯೋಜನೆಗಳ ಪ್ರಾಧಿಕಾರದ ಉಪಾಧ್ಯಕ್ಷ ಡಿ.ಎನ್.ಮೈಲಾರಪ್ಪ, ನಗರ ಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ತಾಜ್‌ಪೀರ್ ಅವರು ಅಂಬೇಡ್ಕರ್ ಭಾಚಚಿತ್ರಕ್ಕೆ ಪುಷ್ಪ ಸಮರ್ಪಿಸಿ ಮೆರವಣಿಗೆ ಚಾಲನೆ ನೀಡಿದರು.

**ಸಂವಿಧಾನ ಮಹತ್ವ ಸಾರಿದ ಸ್ತಬ್ಧಚಿತ್ರಗಳು:** ಕೃಷಿ, ತೋಟಗಾರಿಕೆ, ಶಿಕ್ಷಣ ಇಲಾಖೆ ಸ್ತಬ್ಧಚಿತ್ರಗಳು ಸಂವಿಧಾನ ರಚನೆಯಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಕೊಡುಗೆ ಹಾಗೂ ಸಂವಿಧಾನದ ಮಹತ್ವವನ್ನು ಸಾರಿದವು. ಕೃಷಿ ಇಲಾಖೆಯು ಹೂವಿನಿಂದಲೇ ಅಂಬೇಡ್ಕರ್ ಹಾಗೂ ಸಂವಿಧಾನ ಪ್ರತಿಕೃತಿಯನ್ನು ರಚಿಸಿ ನೋಡುಗರ ಗಮನ ಸೆಳೆಯಿತು. ತೋಟಗಾರಿಕೆ ಇಲಾಖೆ ಸಂವಿಧಾನ ರಚನೆ ಕರಡು ಸಮಿತಿ ಅಧ್ಯಕ್ಷ ಡಾ.ಬಿ.ಆರ್. ಅಂಬೇಡ್ಕರ್ ಪೂರ್ಣಗೊಂಡ ಸಂವಿಧಾನ ಪ್ರತಿಕೃತಿಯನ್ನು ಅಂದಿನ ಸಂವಿಧಾನ ರಚನಾ ಸಭೆಯ ಅಧ್ಯಕ್ಷ ಡಾ.ಬಾಬು ರಾಜೇಂದ್ರ ಪ್ರಸಾದ್ ಅವರಿಗೆ ಹಸ್ತಾಂತರಿಸುವ ಐತಿಹಾಸಿಕ ಗಳಿಗೆಯನ್ನು ಸ್ತಬ್ಧಚಿತ್ರದ ಮೂಲಕ ಮರುಸೃಷ್ಠಿಸಿತ್ತು. ಇದರೊಂದಿಗೆ ಸಂವಿಧಾನ ಪೀಠಿಕೆ, ಅಂಬೇಡ್ಕರ್ ಅವರ ಜೀವನದ ಅಮೂಲ್ಯ ಕ್ಷಣಗಳ ಸಾಕ್ಷೀಕರಿಸಿರುವ ಫೋಟೋಗಳ ಸಂಗ್ರಹ ಐತಿಹಾಸಿಕ ಕ್ಷಣಗಳನ್ನು ನೋಡುಗರ ಮುಂದೆ ತೆರೆದಿಟ್ಟಿತ್ತು. ಶಾಲಾ ಸಾಕ್ಷರತಾ ಇಲಾಖೆಯು ಸ್ತಬ್ಧಚಿತ್ರ ಹಳೆ ಸಂಸತ್ತು ಭವನ ಹಾಗೂ ಸಂವಿಧಾನ ಪೀಠಿಕೆ ಕಲಾಕೃತಿಯ ಮೂಲಕ ಸಂವಿಧಾನ ಮಹತ್ವ ಸಾರಿತು.ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ: ಜಿಲ್ಲೆಯಲ್ಲಿ ಹೆಚ್ಚುತ್ತಿರುವ ಬಾಲ್ಯ ವಿವಾಹಗಳನ್ನು ತಡೆಯುವ ನಿಟ್ಟಿನಲ್ಲಿ ಹಾಗೂ ಬಾಲ್ಯ ವಿವಾಹ ನಿಷೇಧ ಕಾಯ್ದೆಯ ಅಂಶಗಳನ್ನು ಪ್ರಚುರಪಡಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವಿಶೇಷ ರೂಪಕವನ್ನು ಮೆರವಣಿಯಲ್ಲಿ ಸಾದರಪಡಿಸಿತು. 18 ವರ್ಷದ ಒಳಗಿನ ಬಾಲಕಿ ಹಾಗೂ 21 ವರ್ಷದ ಒಳಗಿನ ಯುವಕರ ಮದುವೆ ಮಾಡುವುದು ಬಾಲ್ಯವಿವಾಹ ಎಂದು ಪರಿಗಣಿಸಲಾಗುತ್ತದೆ. ವಿವಾಹ ನೆರವೇರಿಸಿದ ತಂದೆ ತಾಯಿ, ಬಂಧುಗಳು, ಮದುವೆಯಲ್ಲಿ ಹಾಜರಿದ್ದವರು, ಶಾಮೀಯಾನದವರು, ಪುರೋಹಿತರು, ಕಲ್ಯಾಣ ಮಂಟಪದವರು ಸಹ ಎರಡು ವರ್ಷದ ಶಿಕ್ಷೆ ಅನುಭವಿಸಬೇಕಾಗುತ್ತದೆ ಎನ್ನುವುದನ್ನು ಮನಮುಟ್ಟುವಂತೆ ಸಾರ್ವಜನಿಕರಿಗೆ ತಿಳಿಯಪಡಿಸಿತು.

ಜಲಜೀವನ್ ಮಿಷನ್‌ನ ಜಲೋತ್ಸವ ಸ್ತಬ್ಧಚಿತ್ರ ಹರ್ ಘರ್ ಜಲ್ ಯೋಜನೆ ಮೂಲಕ ಗ್ರಾಮಿಣ ಭಾಗದಲ್ಲಿನ ಶುದ್ಧ ಕುಡಿಯುವ ನೀರಿನ ಸರಬಾಜು ಯೋಜನೆ ಮಹತ್ವ ಸಾರಿತು. ಕಾರ್ಮಿಕ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಸಮಾಜ ಕಲ್ಯಾಣ ಇಲಾಖೆ, ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕೆ.ಎಸ್. ಆರ್.ಟಿ.ಯ ಶಕ್ತಿ ಸ್ತಬ್ಧಚಿತ್ರಗಳು ಆಯಾ ಇಲಾಖೆಗಳ ಮಹತ್ವದ ಕಾರ್ಯಕ್ರಮಗಳ ಮಾಹಿತಿಯನ್ನು ಜನರಿಗೆ ನೀಡಿದವು.

ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್ ವಿದ್ಯಾರ್ಥಿಗಳು ಸೇರಿದಂತೆ ವಿವಿಧ ಜನಪದ ಕಲಾ ತಂಡಗಳು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದವು. ಮೆರವಣಿಗೆ ಹೊಳಲ್ಕೆರೆ ರಸ್ತೆಯ ಕನಕದಾಸ ವೃತ್ತದಿಂದ ಆರಂಭವಾಗಿ, ಸಂಗೊಳ್ಳಿರಾಯಣ್ಣ ವೃತ್ತ, ಗಾಂಧಿ ವೃತ್ತ, ಎಸ್.ಬಿ.ಐ ವೃತ್ತ, ಅಂಬೇಡ್ಕರ್ ವೃತ್ತ, ಮದಕರಿ ನಾಯಕ ವೃತ್ತವನ್ನು ಬಳಿಸಿ ತರಾಸು ರಂಗಮಂದಿರ ತಲುಪಿತು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಉಪನಿರ್ದೇಶಕಿಭಾರತಿಬಣಕಾರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ರೇಣುಪ್ರಸಾದ್, ಪೌರಾಯುಕ್ತೆ ಎಂ.ರೇಣುಕಾ, ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಕಾಳೆಸಿಂಗೆ, ಜಂಟಿಕೃಷಿ ನಿರ್ದೇಶಕ ಮಂಜುನಾಥ್, ರಾಜಣ್ಣ, ಬಾಳೆಕಾಯಿ ಶ್ರೀನಿವಾಸ್, ಮಂಜುನಾಥ್, ಮಹಾಂತೇಶ್ ಸೇರಿದಂತೆ ಹಲವು ಮುಖಂಡರುಗಳು, ವಿವಿಧ ಇಲಾಖೆಗಳ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು, ಸಂಘಟನೆಗಳ ಮುಖಂಡರು ಮೆರವಣಿಗೆಯಲ್ಲಿ ಉಪಸ್ಥಿತರಿದ್ದರು.

















ಚಳ್ಳಕೆರೆ ನಗರದ ತಾಲ್ಲೂಕು ಕಚೇರಿ ಆವರಣದಲ್ಲಿ ಏರ್ಪಡಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್‌ರವರ 134ನೇ, ಬಾಬುಜಗಜೀವನ ರಾಮ್‌ರವರ 118ನೇ ಜನ್ಮದಿನಾಚರಣೆಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಾಧಕರನ್ನು ಸನ್ಮಾನಿಸಲಾಯಿತು.



ಹೊಳಲ್ಕೆರೆ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಭವನದಲ್ಲಿ ಪತ್ರಕರ್ತರ ಸಂಘ ದಿಂದ ಡಾ.ಬಾಬು ಜಗಜೀವನ್ ರಾಮ್, ಡಾ.ಬಿ.ಆರ್. ಆಂಬೇಡ್ಕರ್ ಜಯಂತಿಯನ್ನು ಆಚರಣೆ ಮಾಡಲಾಗಿತ್ತು.

### ಪ್ರಮುಖ ಸುದ್ದಿ

# ರಾಜಬೀದಿಯಲ್ಲಿ ಅಕ್ಕ–ತಂಗಿ ಭೇಟಿಗೆ ಸಕಲ ಸಿದ್ಧತೆ

» ಚಿತ್ರದುರ್ಗ

ಸಹೋದರಿಯರ ನಡುವೆ ಜಗಳ, ಮುನಿಸು ಇರುವುದು ಸಹಜ. ಆದ್ರೆ, ಕೋಟೆನಾಡಿನಲ್ಲಿ ಮಾತ್ರ ಮುನಿದು ಮುಖ ತಿರುಗಿಸುವ ಅಕ್ಕ–ತಂಗಿಯರು ವರ್ಷಕ್ಕೊಮ್ಮೆ ಮಾತ್ರ ಭೇಟಿ ಆಗುವ ಸಂಪ್ರದಾಯವಿದೆ. ಆ ಸಹೋದರಿಯರ ಭೇಟಿಗೆ ಸಾವಿರಾರು ಜನ ಸಾಕ್ಷಿ ಆಗುತ್ತಾರೆ ಎಂಬುದು ಮತ್ತೊಂದು ಸೋಜಿಗ.



ಅಕ್ಕ–ತಂಗಿ ಭೇಟಿ ಉತ್ಸವ ದುರ್ಗದ ಪರಂಪರೆಯ ಉತ್ಸವವಾಗಿದೆ. ದುರ್ಗದ ಹೆಣ್ಣುಮಕ್ಕಳು ಈ ಸಂದರ್ಭದಲ್ಲಿ ತವರಿಗೆ ಬಂದು ಅಕ್ಕ–ತಂಗಿ ಭೇಟಿ ಉತ್ಸವದಲ್ಲಿ ಪಾಲ್ಗೊಂಡು ಸಂಭ್ರಮಿಸುವುದು ವಿಶೇಷವಾಗಿದೆ. ಚಿತ್ರದುರ್ಗ ನಗರದಲ್ಲಿಯೂ ಏಕನಾಥೇಶ್ವರಿ ದೇವಿ, ಉಚ್ಚಂಗ ಯಲ್ಲಮ್ಮ ತಾಯಿ, ಚಾಮುಂಡೇಶ್ವರಿ ದೇವಿ, ಕಣಿವೆ ಮಾರಮ್ಮ ದೇವಿ ಮುಂತಾದ ಹೆಣ್ಣು ದೇವರುಗಳ ಆರಾಧನೆ ಹೆಚ್ಚಾಗಿದೆ.

**ಭೇಟಿಯ ಹಿನ್ನೆಲೆ:** ಅಕ್ಕ ತಂಗಿಯರಾದ ತಿಪ್ಪಿನಘಟಮ್ಮ ಮತ್ತು ಬರಗೇರಮ್ಮ ದೇವಿ ಭೇಟಿಗೂ ಕುತೂಹಲಕಾರಿ ಕಥೆಯೊಂದಿದೆ. ನವದುರ್ಗೆಯರಾದ ಕಾಳಿ, ಉಚ್ಚಂಗೆಮ್ಮ, ತಿಪ್ಪಿನಘಟ್ಟಮ್ಮ, ಬರಗೇರಮ್ಮ, ಚೌಡಮ್ಮ, ಗೌರಸಂದ್ರಮಾರಮ್ಮ, ಕಣಿವೆಮಾರಮ್ಮ, ಕುಕ್ಕಡಮ್ಮ, ಏಕನಾಥೇಶ್ವರಿ ದೇವಿ ಚಿತ್ರದುರ್ಗದ ರಕ್ಷಕ ದೇವತೆಗಳು ಎನ್ನುವ ಪ್ರತೀತಿ ಇದೆ. ನವದುರ್ಗೆಯರಲ್ಲಿ ತಿಪ್ಪಿನ ಘಟ್ಟಮ್ಮನಿಗೆ ಏಳು ಜನ ಮಕ್ಕಳು. ಈಕೆಯ ಪ್ರೀತಿ ಪಾತ್ರ ಅಕ್ಕ ಬರಗೇರಮ್ಮನಿಗೆ ಮಕ್ಕಳಿರಲಿಲ್ಲ. ಹೀಗಾಗಿ ತಂಗಿಯ ಮಕ್ಕಳ ಮೇಲೆ ಅಪಾರ ಮಮತೆ, ಪ್ರೀತಿ– ವಾತ್ಸಲ್ಯವಿತ್ತು. ವಾರಕ್ಕೊಮ್ಮೆ ತಂಗಿ ಮನೆಗೆ ಬಂದು, ಮಕ್ಕಳನ್ನು ಕಂಡು ಅವರ ಜತೆ ಆಟವಾಡುತ್ತಾ ಕಾಲ ಕಳೆದು ಹಿಂತಿರುಗುತ್ತಿದ್ದಳು.

ಅಕ್ಕ–ತಂಗಿಯರ ಮಮತೆ ಪ್ರೀತಿಯನ್ನು ಕಂಡು ಅಸೂಯೆ ಪಟ್ಟ ನವದುರ್ಗೆಯರಲ್ಲಿ ಒಬ್ಬಳು ತಿಪ್ಪಿನಘಟ್ಟಮ್ಮನಿಗೆ, ಬರಗೇರಮ್ಮ ಬಂಜೆ ಆಕೆ ಬಂದು ನಿನ್ನ ಮಕ್ಕಳನ್ನು ಮುಟ್ಟಿದರೆ ಒಳ್ಳೆಯದಾಗುವುದಿಲ್ಲ ಎಂದು ಚಾಡಿ ಹೇಳುತ್ತಾಳೆ. ಇದರಿಂದ ಹೆದರಿದ ತಿಪ್ಪಿನಘಟ್ಟಮ್ಮ ತನ್ನ ಅಕ್ಕ ಮನೆಗೆ ಬಂದಾಗ ತನ್ನ ಮಕ್ಕಳು ಆಕೆಯ ದೃಷ್ಟಿಗೆ ಬೀಳಬಾರದು ಎಂದು ಮಕ್ಕಳನ್ನು ಬಚ್ಚಿಡುತ್ತಾಳೆ.

ಇದರಿಂದ ಕೋಪಗೊಂಡ ಅಕ್ಕ ಬರಗೇರಮ್ಮ ಸಿಟ್ಟಿನಲ್ಲಿ 'ನಿನ್ನ ಮಕ್ಕಳು ಕಲ್ಲಾಗಲಿ'. ಇನ್ನೆಂದೂ ನಿನ್ನ ಮುಖ ನೋಡುವುದಿಲ್ಲ ಎಂದು ಪ್ರತಿಜ್ಞೆ ಮಾಡಿ ಹಿಂತಿರುಗುತ್ತಾಳೆ. ಅಕ್ಕ–ತಂಗಿ ದೂರವಾದ ಪರಿಣಾಮ ಊರಿನ ಜನರ ಉಲ್ಲಾಸ ಕುಗ್ಗುತ್ತದೆ. ಏನಾದರೂ ಮಾಡಿ ಅಕ್ಕ–ತಂಗಿಯರನ್ನು ಪುನ: ಭೇಟಿ ಮಾಡಿಸಬೇಕೆಂದು ನವದುರ್ಗೆಯರಲ್ಲಿ ಹಿರಿಯಳಾದ ಏಕನಾಥೇಶ್ವರಿಗೆ ಮೊರೆ ಹೋಗುತ್ತಾರೆ.

ಏಕನಾಥೇಶ್ವರಿ ಊರಿನ ಒಳಿತಿಗಾಗಿ ಭಕ್ತರ ಸಂತೋಷಕ್ಕಾಗಿ ವರ್ಷಕ್ಕೊಮ್ಮೆಯಾದರೂ ನಿಶ್ಚಿತ ಸ್ಥಳದಲ್ಲಿ ತನ್ನ ಸಮ್ಮುಖದಲ್ಲಿ ಅಕ್ಕ–ತಂಗಿಯರ ಭೇಟಿಯಾಗಬೇಕೆಂದು ಆದೇಶಿಸುತ್ತಾಳೆ. ಹಿರಿ ಅಕ್ಕನ ಅಣತಿಯಂತೆ ಪ್ರತಿ ವರ್ಷ ಅಕ್ಕ–ತಂಗಿಯರು ನಗರದ ಹಾಗೂ ಸುತ್ತಮುತ್ತಲಿನ ಹತ್ತಾರು ಹಳ್ಳಿಗಳ ಭಕ್ತರ ಮನೆಗಳಲ್ಲಿ ಎಂಟು ದಿನಗಳ ಕಾಲ ಪೂಜೆ ಸ್ವೀಕರಿಸಿ ಆನಂದದಿಂದ ಭಕ್ತರ ಮೊರೆಗೆ ಮನಸೋತು ಅಪಾರ ಭಕ್ತರ ನಡುವೆ ನಗರದ ದೊಡ್ಡಪೇಟೆಯಲ್ಲಿ ಭೇಟಿಯಾಗುತ್ತಾರೆ. ಈ ಭೇಟಿಯನ್ನು ಬೆಟ್ಟದ ತುದಿಯಲ್ಲಿ ನಿಂತು ಏಕನಾಥೇಶ್ವರಿ ವೀಕ್ಷಿಸುತ್ತಾಳೆಂದು ಪ್ರತೀತಿ ಇದೆ. ಜನಪದ ಹಿನ್ನೆಲೆಯ ಈ ಭೇಟಿ ಉತ್ಸವ ನಗರದ ಸಾಂಸ್ಕೃತಿಕ ಹಬ್ಬವೆನಿಸಿದೆ.ಚಿತ್ರದುರ್ಗ ನಗರದ ರಾಜಬೀದಿ ದೊಡ್ಡಪೇಟೆಯಲ್ಲಿ ಏ.15 ಕ್ಕೆ ಆಯೋಜಿಸಿರುವ ಅಕ್ಕ ತಂಗಿಯರ ಐತಿಹಾಸಿಕ ಭೇಟಿ ಉತ್ಸವಕ್ಕೆ ಸಕಲ ಸಿದ್ಧತೆ ನಡೆದಿದೆ. ಜನಪದ ಸೊಗಡಿನ ಹಿನ್ನೆಲೆ ಹೊಂದಿರುವ ಈ ಭೇಟಿ ಉತ್ಸವ ಪ್ರತಿವರ್ಷ ಶ್ರೀ ಏಕನಾಥೇಶ್ವರಿ ಅಮ್ಮನವರ ಸಿಡಿ ಉತ್ಸವದ ನಂತರ ಮೊದಲ ಮಂಗಳವಾರ ನಡೆಯುವುದು ವಾಡಿಕೆ.

ಅದರಂತೆ ಇಂದು ನಡೆಯಲಿರುವ ಭೇಟಿ ಉತ್ಸವಕ್ಕೆ ರಾಜಬೀದಿ ದೊಡ್ಡಪೇಟೆಯಲ್ಲಿ ತಳಿರು ತೋರಣಗಳಿಂದ ಸಿಂಗರಿಸಲಾಗಿದೆ. ರಾಜ ಉತ್ಸವಾಂಬ ಉಚ್ಚಂಗಿ ಯಲ್ಲಮ್ಮ ದೇವಸ್ಥಾನದಿಂದ ರಂಗಯ್ಯನ ಬಾಗಿಲಿನವರೆಗೂ ರಸ್ತೆಯ ಎರಡೂ ಬದಿಗಳಲ್ಲಿ ಸಾರ್ವಜನಿಕರು ಭೇಟಿ ಉತ್ಸವ ವೀಕ್ಷಿಸಲು ಬ್ಯಾರಿಕೇಡ್ ನಿರ್ಮಿಸಲಾಗಿದೆ.

ಭೇಟಿ ಉತ್ಸವ ಸಮಿತಿಯಿಂದ ಉತ್ಸವಕ್ಕೆ ಬೇಕಾದ ಎಲ್ಲಾ ರೀತಿಯ ವ್ಯವಸ್ಥೆ ಕಲ್ಪಿಸಲಾಗುತ್ತಿದ್ದು, ಜತೆಗೆ ಪ್ರತಿ ವರ್ಷದಂತೆ ನಗರಸಭೆಯಿಂದ ಸ್ವಚ್ಛತಾ ಕಾರ್ಯ, ನೀರಿನ ಸೌಕರ್ಯ, ಹೆಚ್ಚಿನ ವಿದ್ಯುತ್ ದೀಪಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ. ಮಹೋತ್ಸವ ನಡೆಯುವ ಸ್ಥಳದಲ್ಲಿ ಏ.15ರ ಬೆಳಗ್ಗೆಯಿಂದ ಆಕರ್ಷಕ ಅಲಂಕಾರ ನಡೆಯಲಿದ್ದು, ಭೇಟಿಯಾಗುವ ನಿಗದಿತ ಸ್ಥಳದಲ್ಲಿ ಓಂ ಚಿಹ್ನೆಯ ಆಕಾರದಲ್ಲಿ ನಾನಾ ಪುಷ್ಪಗಳಿಂದ ಹಾಗೂ ಮೇಲ್ಭಾಗದಲ್ಲಿ ಮಿನುಗುವ ವರ್ಣಮಯ ವಸ್ತುಗಳಿಂದ ಸಿಂಗರಿಸಲಾಗಿದೆ.ಅಕ್ಕ–ತಂಗಿಯರ ಬೇಟಿಗಾಗಿನಗರಸಭೆಯಪೌರಕಾರ್ಮಿಕರು ಹಗಲು ಇರಳು ಶ್ರಮವನ್ನು ಹಾಕುತ್ತಿದ್ದಾರೆ ಕಳೆದ ಒಂದು ವಾರದಿಂದಲೇ ಅಕ್ಕ–ತಂಗಿಯರ ಭೇಟಿಯಾಗುವ ಸ್ಥಳವನ್ನು ಸ್ವಚ್ಛ ಮಾಡುವ ಕಾರ್ಯದಲ್ಲಿ ಮಗ್ನರಾಗಿದ್ದಾರೆ. ಆ ಸ್ಥಳವನ್ನು ಪೂರ್ಣ ಪ್ರಮಾಣದಲ್ಲಿ ಸ್ವಚ್ಛ ಮಾಡಿ ಜನತೆ ಕುಳಿತು ಕೊಳ್ಳಲು ಬೇಕಾದ ವ್ಯವಸ್ಥೆಯನ್ನು ಮಾಡಿದ್ದಾರೆ. ಇದರೊಂದಿಗೆ ಭೇಟಿಯ ಸ್ಥಳದಲ್ಲಿ ಸುತ್ತಲೂ ಬ್ಯಾರಿಕೇಟಿಂಗ್ ಮಾಡಿದ್ದು, ಭೇಟಿ ಸಮಯದಲ್ಲಿ ಜನತೆ ಆಗಮಿಸದಂತೆ ವ್ಯವಸ್ಥೆಯನ್ನು ಮಾಡಲಾಗಿದೆ.

# ಅಂಬೇಡ್ಕರ್‌ಗೆ ಕಾಂಗ್ರೆಸ್‌ನಿಂದ ಅನ್ಯಾಯ

» ಚಿತ್ರದುರ್ಗ

ಡಾ. ಬಿ.ಆರ್ ಅಂಬೇಡ್ಕರ್ ಅವರು ಭಾರತದಲ್ಲಿ ಸಮಾನತೆ, ಸಾಮಾಜಿಕ ನ್ಯಾಯ, ಮಾನವ ಘನತೆ ಮತ್ತು ಹಕ್ಕುಗಳಿಗಾಗಿ ಸುಮಾರು ನಾಲ್ಕು ದಶಕಗಳ ಕಾಲ ಹೋರಾಡಿದ ಮಹಾನ್ ನಾಯಕ, ಅವರ ಚಿಂತನೆಗಳು ಜಗತ್ತಿನ ಮಾನವ ಕುಲಕ್ಕೆ ಸರ್ವಕಾಲಕ್ಕೂ ಪ್ರಸ್ತುತವಾದಂತಹವುಗಳಾಗಿವೆ ಎಂದು ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್ ತಿಳಿಸಿದರು.

ಚಿತ್ರದುರ್ಗ ನಗರದ ಭಾರತೀಯ ಜನತಾ ಪಾರ್ಟಿಯ ಕಚೇರಿಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಡಾ. ಬಿ.ಆರ್ ಅಂಬೇಡ್ಕರ್ ಅವರು 134ನೇ ಜಯಂತಿಯ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದ ಅವರು, ಅಂಬೇಡ್ಕರ್ ರವರು ಜೀವನದಲ್ಲಿ ತಮೆಗ ಆದ ಅವಮಾನ ಬೇರೆ ಯಾರಿಗೂ ಆಗಬಾರದೆಂದುಸಂವಿಧಾನದಲ್ಲಿಎಲ್ಲರಿಗೂ ಸಹಾ ಸಮಾನವಾದ ಅವರಕಾಶವನ್ನು ನೀಡಿದ್ದಾರೆ. ಇದರಿಂದಾಗಿ ಭಾರತದಲ್ಲಿ ಬಲಿಷ್ಠವಾದ ಸಂವಿಧಾನ ಇದೆ, ಇದರ ಮೂಲಕ ಎಲ್ಲರಿಗೂ ನ್ಯಾಯ ಸಿಗುವಂತ ವಾತಾವರಣ ಸೃಷ್ಟಿಯಾಗಿದೆ. ಅಂಬೇಡ್ಕರ್ ರವರ ಜೀವನದಲ್ಲಿ ಕಾಂಗ್ರೆಸ್ ಬಹಳಷ್ಟು ಅನ್ಯಾಯವನ್ನು ಮಾಡಿದೆ ಅವರು ಮರಣದಲ್ಲಿಯೂ ಸಹಾ ಕಾಂಗ್ರೆಸ್ ತಮ್ಮ ಬುದ್ದಿಯನ್ನು ತೋರಿಸಿದೆ. ಅವರ ಹೆಣವನ್ನು ಉಳಲು ಸಹಾ ದೆಹಲಿಯಲ್ಲಿ ಜಾಗವನ್ನು ಅಂದಿನ ಕಾಂಗ್ರೆಸ್ ಸರ್ಕಾರ ನೀಡಲಿಲ್ಲ ಇದನ್ನು ದಲಿತರಿಗೆ ತಿಳಿಸುವಂತ ಕಾರ್ಯ ಬಿಜೆಪಿ ಕಾರ್ಯಕರ್ತರಿಂದ ಆಗಬೇಕಿದೆ ಎಂದರು.




ಮಾಜಿ ಶಾಸಕರಾದ ಎಸ್. ಕೆ.ಬಸವರಾಜನ್ ಮಾತನಾಡಿ, ಡಾ. ಬಿ.ಆರ್ ಅಂಬೇಡ್ಕರ್ ಅವರು ರಚನೆ ಮಾಡಿದ ಸಂವಿಧಾನದಿಂದ ಇಂದು ಎಲ್ಲರು ಉತ್ತಮವಾದ ಜೀವನವನ್ನು ನಡೆಸಲು ಸಾಧ್ಯವಾಗಿದೆ. ಅಂದಿನ ಕಾಲದಲ್ಲಿ ರಾಜರು ಆಡಳಿತವನ್ನು ನಡೆಸುತ್ತಿದ್ದು ಎಲ್ಲರನ್ನು ಒಟ್ಟುಗೂಡಿ ಒಂದು ದೇಶವನ್ನಾಗಿ ಮಾಡಬೇಕೆಂಬುದು ಅವರ ಕನಸಾಗಿತ್ತು ಅದನ್ನು ಸಂವಿಧಾನ ರಚನೆ ಮಾಡುವುದರ ಮೂಲಕ ಈಡೇರಿಸಿದ್ದಾರೆ. ಡಾ ಅಂಬೇಡ್ಕರರು ತಾವು ಸ್ವತಃ ಮೊದಲು ಭಾರತೀಯರುಕೊನೆಗೂಭಾರತೀಯರೆಂದ ಭಾರತೀಯತ್ವಕ್ಕೆ ತಾಕದಂತೆ ಹೊರತು ಅಂಬೇಡ್ಕರ್ ರವರನ್ನು ನೋಡುವ ಪರಿಕಲ್ಪನೆ ಬದಲಾಗದು ಆದರೆ ಅದನ್ನು ಬದಲಿಸುವ ಶಕ್ತಿ ಇಂದಿನ ಯುವಕರಲಿದೆ ಮತ್ತು ಅಂಬೇಡ್ಕರ್ ಅವರ ಸೈದ್ಧಾಂತಿಕ ಮಾರ್ಗ ಅನುಸರಿಸುವ ಪ್ರತಿಯೊಬ್ಬ ವ್ಯಕ್ತಿಯ ಮೇಲೆ ಅವಲಂಬಿತವಾಗಿದೆ. ಎಂದರು. ಕಾರ್ಯದರ್ಶೀ ಮೋಹನ್ ಕುಮಾರ್ ಮಾತನಾಡಿ, ಅಂಬೇಡ್ಕರ್ ರವರು ಬಾಲ್ಯದಿಂದಲೇ ಕಷ್ಟಗಳನ್ನು ಅನುಭವಿಸುವುದರ ಮೂಲಕ ಬೇರೆಯವರಯು ಸಹಾ ಇದನ್ನು ಅನುಭವಿಸಬಾರದೆಂದು ಸಂವಿಧಾನದಲ್ಲಿ ಎಲ್ಲರಿಗೂ ಸಹಾ ಅನುಕೂಲವಾಗುವಂತ ಕಾಯ್ದೆಗಳನ್ನುರೂಪಿಸಿದ್ದಾರೆ.ಭೇರೆಯವರು ಬರೀ ಮಾತಿನಲ್ಲಿ ಹೇಳಿದರೆ ಅಂಬೇಡ್ಕರ್ ರವರ ಲಿಖಿತವಾಗಿ ಕಾಯ್ದೆಯ ರೂಪದಲ್ಲಿ ಸೌಲಭ್ಯವನ್ನು ನೀಡಿದ್ದಾರೆ. ಇವರು ಮಾಡಿದ ಕಾನೂನು ಎಲ್ಲರಿಗೂ ಸಹಾ ವರದಾನವಾಗಿದೆ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷರಾದ ಮುರಳಿ ಮಾತನಾಡಿ, ಇಂತಹ ಮಹಾನ್ ಮಾನವತವಾದಿ, ದಾರ್ಶನಿಕ, ವಿಶ್ವರತ್ನ ಬಾಬಾ ಸಾಹೇಬ್ ಅಂಬೇಡ್ಕರ್ ರವರ ಜೀವನವು ಯುಗದ ಚರಿತ್ರೆಯಾಗಿದೆ ಹಾಗೂ ಸ್ಪೂರ್ತಿಯ ಚರಿತ್ರೆಯಾಗಿದೆ. ಅಂಬೇಡ್ಕರ್ ಭಾರತದ ಸಾಮಾಜಿಕ, ರಾಜಕೀಯ, ಧಾರ್ಮಿಕ ಚಿಂತನಗಳ ಮೇಲೆ ಅಂಬೇಡ್ಕರ್ ಅವರ ವ್ಯಕ್ತಿತ್ವ ಕಾಣಬಹುದು. ಕಾಂಗ್ರೆಸ್ ಅಂಬೇಡ್ಕರ್ ರವರ ಬಗ್ಗೆ ಮೊಸಳೆ ಕಣ್ಣೀರನ್ನು ಹಾಕತ್ತಿದೆ ಚುನಾವಣೆ ಸಮಯದಲ್ಲಿ ಮಾತ್ರ ಅವರ ಹೆಸರನ್ನು ಬಳಕೆ ಮಾಡಿ ಮತವನ್ನ ಪಡೆಯುತ್ತಿದೆ ತದ ನಂತರ ಅವರನ್ನು ಮರೆಯುತ್ತಿದೆ. ನೆಹರುರವರ ಕುಟುಂಬಕ್ಕೆ ಅನೂಕೂಲವಾಗಲೆಂದು ಸಂವಿಧಾನವನ್ನು 76 ಬಾರಿ ತಿದ್ದುಪಡಿಯನ್ನು ಮಾಡಿದ್ದಾರೆ. ಅಂಬೇಡ್ಕರ್‌ರವರು ಯಾವ ಕಾರಣಕ್ಕೂ ಕೆಲವೊಂದು ತಿದ್ದುಪಡಿಯನ್ನು ಮಾಡಬಾರದೆಂದು ಹೇಳಿದ್ದರೂ ಅದನ್ನೇ ಕಾಂಗ್ರೆಸ್ ತನ್ನ ಸ್ವಾರ್ಥಕ್ಕಾಗಿ ತಿದ್ದುಪಡಿಯನ್ನು ಮಾಡಿದೆ ಇದನ್ನು ನಮ್ಮ ಕಾರ್ಯಕರ್ತರು ದಲಿತರಿಗೆ ತಿಳಿಸುವಂತ ಕಾರ್ಯವನ್ನು ಮಾಡಬೇಕಿದೆ ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿಪ್ರಧಾನಕಾರ್ಯದರ್ಶಿ ಸಂಪತ್ ಕುಮಾರ್, ಶ್ಯಾಮಲ ಶಿವಪ್ರಕಾಶ್, ಕೆ.ಮಲ್ಲಿಕಾರ್ಜನ್, ಶ್ರೀಮತಿ ಸೌಭಾಗ್ಯ ಬಸವರಾಜನ್, ಲೋಕೇಶ್ ನಾಗರಾಜ್, ವೆಂಕಟೇಶ್ ಯಾದವ್, ನಂದಿನಾಗರಾಜ್, ಪರಶುರಾಮ್, ಪಾಂಡು, ಶಿವಣ್ಣಚಾರ್, ಬಸಮ್ಮ, ಶಾಂತಮ್ಮ, ಗಾಯತ್ರಿ, ಅರುಣ್ ಕುಮಾರಿ, ಕಿರಣ, ಲಿಂಗರಾಜು, ಛಲವಾದಿ ತಿಪ್ಪೇಸ್ವಾಮಿ ದಗ್ಗೆ ಶಿವಪ್ರಕಾಶ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಕ್ಯಾದಿಗೆರೆ ಗ್ರಾಮದಲ್ಲಿ ಕುಡಿಯುವ ನೀರಿನ ಟ್ಯಾಂಕ್‌ಗೆ ಶಾಸಕ ವೀರೇಂದ್ರ ಪಪ್ಪಿ ಭೂಮಿ ಪೂಜೆ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕು ಡಿ.ಎಸ್. ಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಕ್ಯಾದಿಗೆರೆ ಗ್ರಾಮದಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿ ವಲಯ ಬ್ಯಾಲೆನ್ಸಿಂಗ್ ಟ್ಯಾಂಕ್ ನಿರ್ಮಾಣ ಕಾಮಗಾರಿಗೆ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅವರು ಶನಿವಾರ ಭೂಮಿಪೂಜೆ ನೆರವೇರಿಸಿದರು.

ಕ್ಯಾದಿಗೆರೆ ಗ್ರಾಮದ ಮಟ್ಟಿ ಬಸವೇಶ್ವರ ದೇವಸ್ಥಾನದ ಬಳಿ ಓವರ್ ಹೆಡ್ ಟ್ಯಾಂಕ್ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದ ಅವರು, 452 ಕೋಟಿ ರೂ. ವೆಚ್ಚದಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿಯಲ್ಲಿ ವಾಣಿ ವಿಲಾಸ ಸಾಗರ ಜಲಾಶಯದಿಂದ ಚಿತ್ರದುರ್ಗ ಹಾಗೂ ಹಿರಿಯೂರು ತಾಲ್ಲೂಕಿನ ಬಿಟ್ಟು ಹೋದ 301 ಗ್ರಾಮಗಳಿಗೆ ಶುದ್ಧ ಕುಡಿಯುವ ನೀರು ಸರಬರಾಜು ಮಾಡಲು ಉದ್ದೇಶಿಸಲಾಗಿದೆ. ಯೋಜನೆಯಿಂದ ಚಿತ್ರದುರ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 140 ಹಳ್ಳಿಗಳಿಗೆ ನೀರು ಸರಬರಾಜು ಮಾಡುವ ಕಾಮಗಾರಿಗೆ ಸುಮಾರು 250 ಕೋಟಿ ರೂ. ವೆಚ್ಚವಾಗಲಿದೆ. ಇದರಲ್ಲಿ 01 ಮಾಸ್ಟರ್ ಬ್ಯಾಲೆನ್ಸಿಂಗ್ ಟ್ಯಾಂಕ್, 09– ವಲಯ ಬ್ಯಾಲೆನ್ಸಿಂಗ್ ಟ್ಯಾಂಕ್‌ಗಳು ಹಾಗೂ 40 ಓವರ್ ಹೆಡ್ ಟ್ಯಾಂಕ್‌ಗಳು ಇದೇ ಯೋಜನೆಯಲ್ಲಿ ನಿರ್ಮಾಣವಾಗಲಿವೆ. 09 ವಲಯ ಬ್ಯಾಲೆನ್ಸಿಂಗ್ ಟ್ಯಾಂಕ್‌ಗಳ ಪೈಕಿ, ಕ್ಯಾದಿಗೆರೆ ಗ್ರಾಮದಲ್ಲಿ ಒಂದು ಬ್ಯಾಲೆನ್ಸಿಂಗ್ ಟ್ಯಾಂಕ್ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಲಾಗುತ್ತಿದೆ. ಈ ಟ್ಯಾಂಕ್‌ನಿಂದ ಡಿ.ಎಸ್. ಹಳ್ಳಿ, ಜೆ.ಎನ್. ಕೋಟೆ, ದ್ಯಾಮವ್ವನಹಳ್ಳಿ ಪಂಚಾಯತಿ ವ್ಯಾಪ್ತಿಯ ಹಳ್ಳಿಗಳಿಗೆ ಶುದ್ಧ ಕುಡಿಯುವ ನೀರು ಸರಬರಾಜು ಮಾಡಲಾಗುವುದು ಎಂದು ಶಾಸಕ ವೀರೇಂದ್ರ ಪಪ್ಪಿ ಅವರು ಮಾಹಿತಿ ನೀಡಿದರು.



ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್. ಶಿವಣ್ಣ, ಗ್ರಾಮ ಪಂಚಾಯತಿ ಅಧ್ಯಕ್ಷೆ ಶಶಿಕಲಾ ತಿಪ್ಪೇಸ್ವಾಮಿ, ಸದಸ್ಯರುಗಳಾದ ಕಲ್ಲಪ್ಪ, ಲಕ್ಷ್ಮೀದೇವಿ, ಕಲ್ಲೇಶ್, ವಿದ್ಯಾವತಿ, ರೆಹಮಾನ್ ಸಾಬ್, ರಾಕೇಶ್, ಮಾರುತಿ ಸಾಲಪಯ್ಯ, ಸುಧಮ್ಮ, ಇಂಗಳದಾಳು ಗ್ರಾ.ಪಂ. ಅಧ್ಯಕ್ಷ ಶಿರವಲಪ್ಪ, ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ರವಿಕುಮಾರ್, ಗ್ರಾ.ಪಂ. ಪಿಡಿಒ., ಮುಖಂಡರಾದ ಲಿಂಗಬಸಪ್ಪ, ದೇವೇಂದ್ರಪ್ಪ, ಪಾಪಣ್ಣ, ಚಿತ್ರದುರ್ಗ ನಗರಸಭಾ ಸದಸ್ಯ ರಮೇಶ್ ಮುಂತಾದವರು ಉಪಸ್ಥಿತರಿದ್ದರು.

## ಚಿತ್ರದುರ್ಗ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಅಂಬೇಡ್ಕರ್ ಜಯಂತಿ



» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಇಂದು ಡಾ.ಬಿ.ಆರ್. ಅಂಬೇಡ್ಕರ್‌ರವರ 134ನೇ ಜನ್ಮ ದಿನಾಚರಣೆಯನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಡಿಸಿಸಿ ಅಧ್ಯಕ್ಷರಾದ ತಾಜ್‌ಪೀರ್ ಮಾತನಾಡಿ,ಅಂಬೇಡ್ಕರ್‌ರವರುತಮ್ಮಜೀವಿತಾವಧಿಯಲ್ಲಿಅನುಭವಿಸಿದ ಕಷ್ಟಗಳನ್ನು ಬೇರೆ ಯಾವ ಜನಾಂಗದವರು ಅನುಭವಿಸಬಾರದೆಂದು ಅವರು ರಚನೆ ಮಾಡಿದ ಸಂವಿಧಾನದಲ್ಲಿ ಎಲ್ಲರಿಗೂ ಸಹಾ ಉತ್ತಮವಾದ ಸೌಲಭ್ಯ ಸಿಗುವಂತೆ ಮಾಡಿದರು. ಪ್ರಪಂಚದಲ್ಲಿಯೇ ನಮ್ಮ ದೇಶ ಉತ್ತಮವಾದ ಪ್ರಜಾಪ್ರಭುತ್ವವನ್ನು ಹೊಂದಿದ ದೇಶವಾಗಿದೆ. ಅಂಬೇಡ್ಕರ್ ಕೇವಲ ಆರ್ಥಿಕ ತಜ್ಞರಾಗಿರದೆ, ತತ್ವಜ್ಞಾನಿ, ರಾಜಕೀಯ ಮುತ್ಸದ್ದಿ, ನ್ಯಾಯವಾದಿ ,ಪ್ರಗತಿಪರ ಚಿಂತಕ ಹೀಗೆ ವಿಶೇಷ ಗುಣಗಳ ಗಣಿ ಆಗಿದ್ದವರು. ಸಮಾನತೆ ಅನ್ನುವುದು ಕೇವಲ ಒಂದು ಜನಾಂಗಕ್ಕೆ ಅಲ್ಲ, ಯಾರು ಹಿಂದುಳಿದಿದ್ದಾರೆ ಅವರೆಲ್ಲರಿಗೂ ಸಾಮಾಜಿಕ ನ್ಯಾಯ ಸಿಗಬೇಕೆಂದು ಪ್ರತಿಪಾದಿಸಿದವರು ಅಂಬೇಡ್ಕರ್ ರವರಾಗಿದ್ದರು ಎಂದರು. ಸರ್ಕಾರದ ಗ್ಯಾರೆಂಟಿ ಯೋಜನೆಯ ಜಿಲ್ಲಾಧ್ಯಕ್ಷರಾದ ಶಿವಣ್ಣ ಮಾತನಾಡಿ, ಅಂಬೇಡ್ಕರ್ ಅವರು ಚಿಂತನೆಗಳು ಒಂದು ವರ್ಗ, ಜಾತಿ ,ಧರ್ಮಕ್ಕೆ ಸೀಮಿತವಾದದಲ್ಲ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಬದುಕುವ ಎಲ್ಲರಿಗೂ ಅನ್ವಯವಾಗುತ್ತವೆ ಅಂಬೇಡ್ಕರ್ ಅವರು ಶಾಲಾ ,ಕಾಲೇಜುಗಳಲ್ಲಿ ಓದುವಾಗ ಜಾತಿ ಪದ್ಧತಿಯಿಂದ ಆಗುತ್ತಿದ್ದ ನೋವುಗಳನ್ನು ಸಹಿಸಿಕೊಂಡು ಮುಂದೆ ಅವು ಮರುಕಳಿಸದಂತೆ ಬೇರೆಯವರಿಗೆ ಇದರಿಂದ ನೋವಾಗಬಾರದೆಂದು ತೀರ್ಮಾನಿಸಿ ಒಂದು ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರ ಮಾಡಿದ ಕೀರ್ತಿ ಸಂವಿಧಾನ ಶಿಲ್ಪಿಗೆ ಸಲ್ಲುತ್ತದೆ ಎಂದು ಅವರು ಅಭಿಪ್ರಾಯಪಟ್ಟರು.ಕಾರ್ಯಕ್ರಮದಲ್ಲಿ ಮಾಜಿ ಶಾಸಕರಾದ ಉಮಾಪತಿ, ಕಾರ್ಯಾಧ್ಯಕ್ಷರಾದ ಹಾಲಸ್ವಾಮಿ, ಸಂಪತ್ ಕುಮಾರ್ ನಗರಸಭಾ ಸದಸ್ಯರಾದ ಮೀನಾಕ್ಷಿ, ಮುಖಂಡರುಗಳಾದ ಎನ್.ಡಿ.ಕುಮಾರ್, ಖುದ್ದುಸ್, ಮುದಾಸಿರ್ ಪ್ರಕಾಶ್ ರಾಮ ನಾಯ್ಕ್, ಖಾಸಿಂ ಆಲಿ, ಗ್ಯಾರೆಂಟಿ ತಾಲ್ಲೂಕು ಅಧ್ಯಕ್ಷ ಪ್ರಕಾಶ್, ರಹಮತ್ತುಲ್ಲಾ, ನರಸಿಂಹ ಸೇರಿದಂತೆ ಇತರರು ಭಾಗವಹಿಸಿದ್ದರು.

## ಮಹಿಳಾ ಆಯೋಗದ ಅಧ್ಯಕ್ಷರಿಂದ ಅಹವಾಲು ಸ್ವೀಕಾರ

» ದಾವಣಗೆರೆ

ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮಿಚೌಧರಿ ಅವರು ಏಪ್ರಿಲ್ 16 ರಂದು ಸಂಜೆ 4 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು. ಎಸ್‌ಹೆಚ್‌ಡಬ್ಲ್ಯೂ ಜಿಲ್ಲೆಯಲ್ಲಿ ಜಾರಿಯಾದ ಬಗ್ಗೆ ಸರ್ಕಾರಿ, ಖಾಸಗಿ ಸಂಸ್ಥೆಗಳಲ್ಲಿ ಸ್ಥಳೀಯ ಹಾಗೂ ಅಂತರಿಕ ದೂರು ಸಮಿತಿ, ಮಹಿಳಾ ದೌರ್ಜನ್ಯ ಪ್ರಕರಣ, ಮಹಿಳಾ ಮೀಸಲಾತಿ, ಕಾಲೇಜು ವಿದ್ಯಾರ್ಥಿನಿಯರು ಮತ್ತು ಮಹಿಳೆಯರ ಸುರಕ್ಷತೆಯ ಕುರಿತಂತೆ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ರಾಜಾನಾಯ್ಕ ತಿಳಿಸಿದ್ದಾರೆ.


**ಪ್ರಮುಖ ಸುದ್ದಿ**

# ಸಹಕಾರಿ ಬ್ಯಾಂಕ್‌ಗಳು ಬಡವರ ಪಾಲಿಗೆ ವರದಾನ: ಎಸ್ಕೆಬಿ

» ಚಿತ್ರದುರ್ಗ

ಸಹಕಾರ ಸಂಘವನ್ನು ಸ್ಥಾಪಿಸುವುದರ ಮೂಲಕ ಬಡವರ ಆರ್ಥಿಕ ಪರಿಸ್ಥಿತಿಯನ್ನು ಸುಧಾರಣೆ ಮಾಡುವಂತ ಗಮನ ನೀಡುವಂತೆ ಮಾಜಿ ಶಾಸಕ ಎಸ್.ಕೆ.ಬಸವರಾಜನ್ ನೂತನ ಆಡಳಿತ ಮಂಡಳಿಗೆ ಸಲಹೆ ನೀಡಿದ್ದಾರೆ.

ಚಿತ್ರದುರ್ಗ ನಗರದ ಜೆಸಿಆರ್ ಬಡಾವಣೆಯ ಮುಖ್ಯ ವೃತ್ತದ ಬಳಿ ಇಂದು ಪ್ರಾರಂಭವಾದ ಶ್ರೀ ಜಗದ್ಗುರು ಪಂಚಾಚಾರ್ಯ (ಎಸ್.ಜೆ.ಪಿ) ಪತ್ತಿನ ಸಹಕಾರ ಸಂಘ ನಿಯಮಿತ ಇದರ ಪ್ರಾರಂಭೋತ್ಸವದ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಇಂದಿನ ದಿನಮಾನದಲ್ಲಿ ಸಹಕಾರ ಎನ್ನುವುದು ಎಲ್ಲರಿಗೂ ಸಹಾ ಅಗತ್ಯವಾಗಿದೆ ಒಬ್ಬರ ಸಹಕಾರ ಇನ್ನೊಬ್ಬರಿಗೆ ಇಲ್ಲದಿದ್ದರೆ ಜೀವನ ನಡೆಸುವುದು ಕಷ್ಟವಾಗುತ್ತದೆ. ರಾಷ್ಟ್ರೀಕೃತ ಬ್ಯಾಂಕ್‌ಗಳುಸಾಲವನ್ನುನೀಡುವಾಗವಿವಿಧ ರೀತಿಯ ದಾಖಲೆಗಳನ್ನು ತೆಗೆದುಕೊಂಡು ಬನ್ನಿ ಎಂದು ಅಲೆದಾಡಿಸುತ್ತಾರೆ ಆದರೆ ನಮ್ಮಂತಹರಿಗಾಗಿ ಇರುವ ಈ ರೀತಿಯ ಸಹಕಾರಿ ಬ್ಯಾಂಕ್‌ಗಳು ಬಡವರ ಪಾಲಿಗೆ ವರದಾನವಾಗುತ್ತಿವೆ ಎಂದರು.



ಈ ರೀತಿಯ ಸಹಕಾರ ಸಂಘಗಳು ಸರಿಯಾದ ರೀತಿಯಲ್ಲಿ ಉಳಿಯಬೇಕಾದರೆ ಅಲ್ಲಿನ ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ವರ್ಗ ಸರಿಯಾಗಿ ಇರಬೇಕಿದೆ ಆಡಳಿತ ಮಂಡಳಿ ಎಲ್ಲದಕ್ಕೂ ಸಹಾ ಮಧ್ಯ ಬರಬಾರದು ಕೆಲವೊಂದು ಸ್ವಾತಂತ್ರ್ಯಗಳನ್ನು ವ್ಯವಸ್ಥಾಪಕರಿಗೆ ನೀಡುವುದರ ಮೂಲಕ ಉತ್ತಮವಾಗಿ ಸಹಕಾರ ಸಂಘ ನಡೆಯಲು ಅನುವು ಮಾಡಬೇಕಿದೆ. ಇಲ್ಲಿ ಹಣ ಇದ್ದವರು ತಮ್ಮ ಹಣವನ್ನು ಇಡುವುದರ ಮೂಲಕ ಬೇರೆಯವರಿಗೆ ಸಹಕಾರ ಸಂಘದ ಮೂಲಕ ನೆರವಾಗಬೇಕಿದೆ. ಸಂಘದ ಆಡಳಿತ ಮಂಡಳಿಯವರು ತಮ್ಮ ಸಹಾಯವನ್ನು ಸಾಧ್ಯವಾದಷ್ಟು ಬಡವರಿಗೆ ನೀಡುವುದರ ಮೂಲಕ ಅವರ ಅರ್ಥಿಕ ಪರಿಸ್ಥಿತಿಯನ್ನು ಸುಧಾರಿಸುವಂತ ಗಮನ ನೀಡುವಂತೆ ಬಸವರಾಜನ್ ಕರೆ ನೀಡಿದರು.

ಸಹಕಾರ ಸಂಘದ ಮುಖ್ಯ ಪ್ರವರ್ತಕರಾದ ಕಲ್ಲೇಶಯ್ಯ ಮಾತನಾಡಿ, ಈ ಸಹಕಾರ ಸಂಘವನ್ನು ಸ್ಥಾಪನೆ ಮಾಡಲು ಹಲವಾರು ವರ್ಷಗಳ ಕಾಲ ಕಷ್ಟವನ್ನು ಪಡಲಾಗಿದೆ ನಮ್ಮ ಸಮುದಾಯದ ಮನೆಗಳಿಗೆ ಭೇಟಿ ಮಾಡಿ ಅವರಿಂದ ಷೇರು ಹಣವನ್ನು ಪಡೆದುಕೊಂಡು ಸಹಕಾರ ಸಂಘವನ್ನು ಸ್ಥಾಪನೆ ಮಾಡುವುದು ಕಷ್ಟದ ಕೆಲಸವಾಗಿದೆ. ಅದರೂ ಸಹಾ ನೀವುಗಳು ನಮ್ಮೆಲ್ಲರ ಮೇಲೆ ವಿಶ್ವಾಸ ನಂಬಿಕೆಯನ್ನು ಇರಿಸಿ ಹಣವನ್ನು ನೀಡಿ ಷೇರನ್ನು ಖರೀದಿ ಮಾಡಲಾಗಿದೆ ಈ ನಂಬಿಕೆಯನ್ನು ನಮ್ಮ ಅಡಳಿತ ಮಂಡಳಿ ಉಳಿಸಿಕೊಳ್ಳಲಿದೆ. ಮಂದಿನ ದಿನದಲ್ಲಿ ಸಹಕಾರ ಸಂಘ ಉತ್ತಮವಾದ ಕಾರ್ಯವನ್ನು ಮಾಡಲಾಗುವುದು ಎಂದರು.

ವಿದ್ಯಾ ವಿಕಾಸ ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ವಿಜಯಕುಮಾರ್ ಮಾತನಾಡಿ, ನಮ್ಮ ಸಮಾಜದ ಬಹು ದಿನಗಳ ಬೇಡಿಕೆ ಇದು ಈಡೇರಿದೆ. ಇದಕ್ಕೆ ನಿಮ್ಮೆಲ್ಲರ ಸಹಕಾರ ಇದೆ. ಮುಂದಿನ ದಿನದಲ್ಲಿ ಈ ಸಹಕಾರ ಸಂಘ ಉತ್ತಮವಾಗಿ ಕೆಲಸವನ್ನು ಮಾಡುವುದರ ಮೂಲಕ ಜನ ಮನ್ನಣೆಯನ್ನು ಪಡೆಯಲಿದೆ. ನಮ್ಮ ಸಮುದಾಯ ಇದಕ್ಕೆ ಪೂರ್ಣ ಪ್ರಮಾಣದ ಸಹಕಾರ ಸಹಾಯ ಮಾಡಲಿದೆ ನಮ್ಮಲ್ಲಿನ ಜನತೆ ದೂರದಿಂದ ನಿಂತು ನೋಡುತ್ತಾರೆ ಹೊರೆತು ಒಳಗಡೆ ಬಂದ ನಿಲ್ಲುವುದಿಲ್ಲ ಒಳಗಡೆ ಬಂದು ಸಮಾಜ ಏನು ಮಾಡುತ್ತಿದೆ ಎಂದು ನೋಡಬೇಕಿದೆ ಅಗ ನಮ್ಮ ಸಮಾಜ ಮತ್ತಷ್ಟು ಬೆಳೆಯಲು ಸಾಧ್ಯವಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಂಗಮ ಸಮಾಜದ ಅಧ್ಯಕ್ಷರಾದ ಎಂ.ಟಿ.ಮಲ್ಲಿಕಾರ್ಜನಯ್ಯ ಸ್ವಾಮಿ, ಶ್ರೀ ಜಗದ್ಗುರು ಪಂಚಾಚಾರ್ಯ (ಎಸ್.ಜೆ.ಪಿ) ಪತ್ತಿನ ಸಹಕಾರ ಸಂಘ ನಿಯಮಿತದ ಕಾರ್ಯದರ್ಶಿ ಎಸ್.ಷಡಾಕ್ಷರಯ್ಯ, ನ್ಯಾಯವಾದಿ ಕೆ.ಎನ್.ವಿಶ್ವನಾಥಯ್ಯ, ಡಾ.ಪ್ರಭುದೇವ್, ಬಿ.ವಿಜಯಕುಮಾರ್, ಶಶಿಧರ್ ಬಾಬು, ಬಸವರಾಜ ಶಾಸ್ತ್ರಿ, ಶ್ರೀಮತಿ ಲೀಲಾವತಿ, ಬಿ.ಎಂ.ಕರಿಬಸವಯ್ಯ, ಜಿ.ಎಂ.ವಿರೇಶ್, ಶರಣಯ್ಯ, ಶಿವನಗೌಡ್ರು, ಹಾಗೂ ಸದಸ್ಯರು, ಸಮಾಜದ ಬಂಧುಗಳು ಭಾಗವಹಿಸಿದ್ದರು.

**ಫಾಸ್ಟ್ ನ್ಯೂಸ್**

## ನಮ್ಮ ಆರೋಗ್ಯದ ಗುಟ್ಟು ಅಡಿಗೆ ಕೋಣೆಯಲ್ಲಿದೆ - ಡಾ.ಶೋಭ



» ಹೊಸದುರ್ಗ

ನಮ್ಮ ಆರೋಗ್ಯ ಗುಟ್ಟು ಅಡಿಗೆ ಕೋಣೆಯಲ್ಲಿದೆ. ಆಹಾರ ಸರಿಯಾಗಿದ್ದರೆ ಔಷಧಿ ಅಗತ್ಯ ಇಲ್ಲ ಎಂದು ಬೆಂಗಳೂರು ಶಿಕ್ಷಣ ಇಲಾಖೆ ರಾಜ್ಯ ನಿರ್ದೇಶಕಿ. ಡಾ.ಶೋಭ ತಿಳಿಸಿದರು. ತಾಲ್ಲೂಕಿನ ಆದ್ರಿಕಟ್ಟೆ ಗ್ರಾಮದಲ್ಲಿ ಪುಷ್ಪಗಿರಿ ಶ್ರೀದೇವಿ ರೈತ ಮಹಿಳಾ ಸ್ವಸಹಾಯ ಸಂಘದ ವತಿಯಿಂದ ಆಯೋಜಿಸಿದ್ದ ಸಿರಿಧಾನ ಮಹತ್ವ ಹಾಗೂ ಅದರ ಪಾಕ ಸ್ಪರ್ಧೆ ಕಾರ್ಯಕ್ರಮದ ಉದ್ಘಾಟನೆಯನ್ನು ನೆರವೇರಿಸಿ ಮಾತನಾಡಿದರು. ಸ್ಪರ್ಧೆಗೆ ಬಂದಿರುವ ಸಿರಿಧಾನ್ಯಗಳ ಆಹಾರ ಅಡಿಗೆ ಗಳು ಪ್ರತಿಯೊಂದು ಒಂದೊಂದು ರುಚಿಕೊಟ್ಟಿದೆ ಈ ಆಹಾರ ನಗರ ವಾಸಿಗಳಿಗೆ ಪರಿಚಯ ಆಗಬೇಕು .ರಾಗಿ ,ಜೋಳ ,ಸಜ್ಜೆ ,ಸಾಮೆ ,ನವಣೆ ,ಬರಗು ,ಹುರುಳಿ ಇತ್ಯಾದಿ ತೃಣಧಾನ್ಯಗಳಿಂದ ತಯಾರಾದ ಈ ಅಡಿಗೆಯಲ್ಲಿ ಎತೇಚ್ಚವಾಗಿ ಪ್ರೋಟೀನ್ ಅಂಶ ದಿಂದ ಕೂಡಿದ್ದು ಇದರಲ್ಲಿ ಬಿ.ಅನ್ನಾಂಗ ಇದೆ ಇದು ಮೂಳೆಗಳು ,ನರಗಳು ಗಟ್ಟಿಯಾಗಲು ಸತ್ವಬರಿತವಾಗಿದೆ ನಗರದಲ್ಲಿ ಬಿಳಿ ಅಕ್ಕಿ ,ಗೋದಿ ಬಳಕೆ ಯಿಂದ ಬೊಜ್ಜು ,ಮಧು ಮೇಹದಂತಹ ಕಾಯಿಲೆಗಳ ಸಂಖ್ಯೆ ಜಾಸ್ತಿ ಯಾಗುತ್ತಿರುವ ಇಂದಿನ ದಿನಮಾನ್ಯಗಳಲ್ಲಿ ಸಿರಿಧಾನ್ಯಗಳ ಬಳಕೆ ,ಕಾಯಿಪಲ್ಯೆ ,ಲಘು ವ್ಯಾಯಮ ದಿಂದ ಜೀವನ ವನ್ನು ರೋಗಗಳಿಂದ ಮುಕ್ತ ಗೊಳಿಸಿ ಬಹುದು ಇಂದು ರೋಗಗಳಿಲ್ಲದ ಮನೆ ಇಲ್ಲ ಎನ್ನುವಂತಾಗಿದೆ ಎಂದ ಅವರು ಸಿರಿಧಾನ್ಯಗಳ ಬಳಕೆ ರಾಮ ಬಾಣ ಇದ್ದಹಾಗೆ ಎಂದರು.

ಸ್ವಸಹಾಯ ಸಂಘದ ಅಧ್ಯಕ್ಷೆ ಜಗದಾಂಬ ಅಧ್ಯಕ್ಷತೆ ವಹಿಸಿದ್ದರು ಕಾರ್ಯಕ್ರಮದಲ್ಲಿ ಪುಷ್ಪಗಿರಿ ಶ್ರೀದೇವಿ ರೈತ ಮಹಿಳಾ ಸ್ವಸಹಾಯ ಸಂಘದ ಸರ್ವ ಸದಸ್ಯರುಗಳು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ಸಿರಿಧಾನ್ಯಗಳ ಆಹಾರ ಪಾಕ ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲರಿಗೂ ಬಹುಮಾನ ವಿತರಿಸಲಾಯಿತು.

## ಶೋಷಿತ ಸಮುದಾಯದ ಪರವಾಗಿ ಹೋರಾಟ ನಡೆಸಿದ ಮಹಾನೀಯರು ಅಂಬೇಡ್ಕರ್: ಬಿ.ಶಿವಣ್ಣ



» ಚಳ್ಳಕೆರೆ

ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಮತ್ತು ಹಸಿರುಕ್ರಾಂತಿಹರಿಕಾರ ಬಾಬುಜಗಜೀವನರಾಮ್‌ರವರು ಶೋಷಿತ ಸಮುದಾಯವೂ ಸೇರಿದಂತೆ ದೇಶದ ಬಡ ಜನರ ಪರವಾಗಿ ಹೋರಾಟ ನಡೆಸಿದ ಮಹಾನೀಯರು. ವಿಶೇಷವಾಗಿ ಶಿಕ್ಷಣವೂ ಸೇರಿದಂತೆ ಹಲವಾರು ಕ್ಷೇತ್ರಗಳಲ್ಲಿ ನಿರ್ಲಕ್ಷಿತ ಸಮುದಾಯಕ್ಕೆ ಕಾಯಕಲ್ಪ ನೀಡಿದ ಕೀರ್ತಿ ಇಬ್ಬರೂ ಮಹಾನ್‌ನಾಯಕರದ್ದು ಎಂದು ಬಿಜೆಪಿ ಜಿಲ್ಲಾ ಎಸ್ಸಿ ಮೋರ್ಚಾ ಅಧ್ಯಕ್ಷ ಬಿ.ಶಿವಣ್ಣತಿಳಿಸಿದರು.ಅವರು,ನಾಯಕನಹಟ್ಟಿಬಿಜೆಪಿ ಮಂಡಲ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಅಂಬೇಡ್ಕರ್ ಮತ್ತು ಬಾಬುಜಗಜೀವನರಾಮ್ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಪ್ರತಿವರ್ಷವೂ ನಾವು ಅದ್ದೂರಿಯಾಗಿ ಇಬ್ಬರೂ ಮಹಾನ್‌ನಾಯಕರ ಜನ್ಮದಿನೋತ್ಸವವನ್ನು ಆಚರಣೆ ಮಾಡುತ್ತೇವೆ. ಆದರೆ, ಅವರ ತತ್ವ, ಸಿದ್ಧಾಂತಗಳ ಅವಳಡಿಕೆಗೆ ಪ್ರಾಮಾಣಿಕ ಯತ್ನ ನಡೆದಿಲ್ಲ. ಅಂಬೇಡ್ಕರ್ ಮತ್ತು ಬಾಬುಜಗಜೀವನರಾಮ್‌ರವರ ಮಹಾನ್‌ಕೊಡುಗೆಯನ್ನು ಈ ದೇಶ ಎಂದೂ ಮರೆಯದು ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಂಡಲಾಧ್ಯಕ್ಷ ಚನ್ನಗಾನಹಳ್ಳಿಮಲ್ಲೇಶ್ ವಹಿಸಿದ್ದರು. ಬಿಜೆಪಿ ಮುಖಂಡ ಎಂವೈಟಿ ಸ್ವಾಮಿ, ಪಟ್ಟಣಪಂಚಾಯಿತಿ ಸದಸ್ಯ ಎನ್.ಮಹಾಂತರೆಡ್ಡಿ, ಜೆಡಿಎಸ್ ಮುಖಂಡ ವೀರಭದ್ರಪ್ಪ, ಅಧ್ಯಕ್ಷ ಕರಿಬಸಪ್ಪ, ಪ್ರಧಾನ ಕಾರ್ಯದರ್ಶಿ ಬೆಂಕಿಗೋವಿಂದಪ್ಪ, ಉಪಾಧ್ಯಕ್ಷೆ ಮಮತಮ್ಮ,ಬಿಜೆಪಿ ಮುಖಂಡರಾದ ಶಂಕರಸ್ವಾಮಿ, ಎಚ್.ವಿ.ಪ್ರಕಾಶ್‌ರೆಡ್ಡಿ, ತ್ರಿಶೂಲ್ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಇಂದು ವಿಶ್ವಕಲಾ ದಿನಾಚರಣೆ

» ಚಿತ್ರದುರ್ಗ

ಲಲಿತ ಕಲಾ ಅಕಾಡೆಮಿ ಹಾಗೂ ಚಿತ್ರ ಕಲಾವಿದರ ಬಳಗದಿಂದ ಏ.15ರಂದು ವಿಶ್ವಕಲಾ ದಿನಾಚರಣೆ ಸಮಾರಂಭ ಹಮ್ಮಿಕೊಳ್ಳಲಾಗಿದೆ. ಕೋಟೆ ಮುಂಭಾಗದ ಮಯೂರ ಯಾತ್ರಿ ನಿವಾಸದ ಸಭಾಂಗಣದಲ್ಲಿ ಅಂದು ಬೆಳಿಗ್ಗೆ 10.30ಕ್ಕೆ ಲಲಿತಕಲಾ ಅಕಾಡೆಮಿ ಸದಸ್ಯ ಸಿ.ಕಣ್ಮೇಶ್ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

## ಫಾಸ್ಟ್ ನ್ಯೂಸ್

### ಅಂಬೇಡ್ಕರ್ ಮತ್ತು ಜಗಜೀವನರಾಮ್ ಕೊಡುಗೆ ಸದಾಸ್ಮರಣೀಯ: ಕೆ.ಟಿ.ಕುಮಾರಸ್ವಾಮಿ.



» ಚಳ್ಳಕೆರೆ

ರಾಷ್ಟ್ರದ ಆಡಳಿತ ಸುಲಲಿತವಾಗಿ ನಡೆಯುವ ನಿಟ್ಟಿನಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್‌ರವರು ರಚಿಸಿದ ಸಂವಿಧಾನವೇ ಮೂಲ ಆಧಾರವಾಗಿದೆ. ಕಡುಬಡತದಲ್ಲೇ ವಿದ್ಯಾಭ್ಯಾಸವನ್ನು ಮಾಡಿದ್ದಲ್ಲದೆ, ವಿದೇಶದಲ್ಲೂ ವ್ಯಾಸಂಗ ಮಾಡಿ ಅಪಾರವಾದ ಜ್ಞಾನವನ್ನು ಅಂಬೇಡ್ಕರ್ ಸಂವಿಧಾನವನ್ನು ರಚಿಸಿಕೊಟ್ಟು ದೇಶವೂ ಎಂದೂಮರೆಯಲಾರದಂತಹ ಕೊಡುಗೆ ನೀಡಿದ್ದಾರೆಂದು ಬಿಜೆಪಿ ಯುವ ಮುಖಂಡ ಕೆ.ಟಿ.ಕುಮಾರಸ್ವಾಮಿ ತಿಳಿಸಿದರು. ಅವರು, ಸೋಮವಾರಬಿಜೆಪಿಪಕ್ಷದಕಾರ್ಯಾಲಯದಲ್ಲಿಪಕ್ಷ ಹಮ್ಮಿಕೊಂಡಿದ್ದ ಡಾ.ಬಿ.ಆರ್.ಅಂಬೇಡ್ಕರ್‌ರವರ 134ನೇ, ಬಾಬುಜಗಜೀವನರಾಮ್‌ರವರ 118ನೇ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಅವರ ಭಾವಚಿತ್ರಕ್ಕೆಪುಷ್ಪನಮನಸಲ್ಲಿಸುವಮೂಲಕಚಾಲನೆ ನೀಡಿ ಮಾತನಾಡಿದರು. ಭಾರತದ ಉಪಪ್ರಧಾನಿ, ಹಸಿರುಕ್ರಾಂತಿಹರಿಕಾರ ಬಾಬುಜಗಜೀವನರಾಮ್ ಸಹ ಶೋಷಿತ ಸಮುದಾಯದ ಅಭ್ಯುದಯಕ್ಕಾಗಿ ಹೋರಾಟ ನಡೆಸಿದ ಮಹನೀಯರು ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಂಡಲಾಧ್ಯಕ್ಷ ಬಿ.ಎಂ.ಸುರೇಶ್‌ವಹಿಸಿದ್ದರು, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಳೆಮಂಡಿರಾಮದಾಸ್, ಜಿಲ್ಲಾ ಎಸ್ಸಿ ಮೋರ್ಚಾ ಅಧ್ಯಕ್ಷ ಕರೀಕೆರೆತಿಪ್ಪೇಸ್ವಾಮಿ, ದಿನೇಶ್‌ರೆಡ್ಡಿ, ಕಾಂತರಾಜ್, ಬದ್ರಿ, ಜೆ.ಕೆ.ತಿಪ್ಪೇಶ್, ಬಾಬಾ ಫಕ್ರುದ್ದೀನ್, ಮೋಹನ್, ಅಶೋಕ್, ಆರ್. ರುದ್ರಮುನಿ ಮುಂತಾದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

### ಎ.ಕೆ ಕಾಲೋನಿಯಲ್ಲಿ ಅಂಬೇಡ್ಕರ್ ಜಯಂತಿ



» ಪರಶುರಾಂಪುರ

ಸಮಾನತೆ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ತಮ್ಮ ಜೀವನವನ್ನೇ ಮುಡುಪಾಗಿಟ್ಟ ಡಾ.ಬಿ.ಆರ್ ಅಂಬೇಡ್ಕರ್ ಭರವಸೆಯ ಬೆಳಕಾಗಿದ್ದಾರೆ ಎಂದು ಯುವ ಕಾಂಗ್ರೆಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆ.ಬಾಬು ತಿಳಿಸಿದರು. ಗ್ರಾಮದ ಎ.ಕೆ ಕಾಲೋನಿಯಲ್ಲಿ ಆಯೋಜಿಸಿದ್ದ ಡಾ.ಬಿ.ಆರ್ ಅಂಬೇಡ್ಕರ್ ಜಯಂತಿಯಲ್ಲಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು. ಶತಶತಮಾನದಿಂದಲೂ ಭಾರತ ದೇಶದಲ್ಲಿರುವ ಜಾತಿ ವ್ಯವಸ್ಥೆಯನ್ನು ಮೀರಿ ಸಮಾನತೆ ಹಾಗೂ ಸಾಮಾಜಿಕ ನ್ಯಾಯವನ್ನು ಹೊಂದಲು ಡಾ.ಬಿ.ಆರ್.ಅಂಬೇಡ್ಕರ್ ಅವರ ಶ್ರಮ ಹಾಗೂ ಹೋರಾಟವನ್ನುನಾವುಗಳು ಸ್ಮರಿಸಿಕೊಳ್ಳಬೇಕಾಗಿದೆ ಎಂದರು. ಹಿರಿಯ ಮುಖಂಡ ಅಂಜಿನಪ್ಪ ಮಾತನಾಡಿ, ಜೀವನದುದ್ದಕ್ಕೂ ತಾರತಮ್ಯ/ಜಾತಿ ವ್ಯವಸ್ಥೆ ವಿರುದ್ಧ ನಿರಂತರವಾಗಿ ಹೋರಾಟ ನಡೆಸುತ್ತಲೇ ಬಂದಂತಹ ಬಾಬಾ ಸಾಹೇಬರು ಎಲ್ಲರಿಗೂ ಸಮಾನ ಹಕ್ಕುಗಳು ಮತ್ತು ಅವಕಾಶಗಳು ಸಿಗಬೇಕೆಂದು ಅಚಲ ಸಂಕಲ್ಪ ಹೊಂದಿದ್ದರು ಎಂದರು. ಗ್ರಾಪಂ ಸದಸ್ಯ ಪಿ.ಓ ಪ್ರಕಾಶ್ ಮಾತನಾಡಿ, ಶಿಕ್ಷಣ ಮತ್ತು ಸಬಲೀಕರಣದಿಂದ ಅಸಮಾನತೆ ಎಂಬುದು ಸಂಪೂರ್ಣವಾಗಿ ಹೋಗಲಾಡಿಸಬೇಕು. ಅದರ ಜೊತೆಯಲ್ಲಿ ತಳ ಸಮುದಾಯಗಳು ಅಭಿವೃದ್ಧಿಯಾಗಬೇಕು ಎಂಬುದು ಅಂಬೇಡ್ಕರ್ ಅವರ ಆಶಯವಾಗಿತ್ತು. 'ಶಿಕ್ಷಣ ಎಂಬುದು ಹುಲಿಯ ಹಾಲಿದ್ದಂತೆ ಅದನ್ನು ಕುಡಿದವರು ಘರ್ಜಿಸಲೇಬೇಕು' ಎಂದು ಹೇಳುವುದರ ಮೂಲಕ ದೇಶದಲ್ಲಿನ ಅಸಮಾನತೆ ನಿವಾರಣೆಗೆ ಶಿಕ್ಷಣವೇ ಮೂಲ ಮದ್ದು ಎಂದು ಹೇಳಿದ್ದರು ಎಂದರು. ಹಿರಿಯ ಮುಖಂಡ ಆಂಜಿನೇಯ, ಗ್ರಾಪಂ ಸದಸ್ಯರಾದ ಪ್ರಕಾಶ್, ಓಬಳೇಶ್, ಬಾಬು, ಮಲ್ಲಿಕಾರ್ಜುನ, ಮಲ್ಲೇಶ್ ದುರುಗೇಶ್, ಮಾರುತಿ, ರಾಜ, ಮಹಾದೇವ, ಭಾಗ್ಯರಾಜ್, ಮಧು, ಭಾನು, ದಿಲೀಪ್, ಆಕಾಶ್, ಉದಯ, ಶಿವಾನಗ್, ಸಂದೀಪ್, ತಿಪ್ಪೇಸ್ವಾಮಿ, ಆದಿ, ವಿನೋದ್, ಲೋಹಿತ್, ವಿರೇಶ್, ವಿರೇಂದ್ರ ಪಟೇಲ್, ಮಲ್ಲಿಕಾರ್ಜುನ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

### ಕೊಟ್ರಸ್ವಾಮಿ ರಥೋತ್ಸವ

» ಚಿತ್ರದುರ್ಗ

ತಾಲೂಕಿನ ಚಿಕ್ಕಪ್ಪನಹಳ್ಳಿ ಗ್ರಾಮದ ಶ್ರೀಗುರು ಕೊಟ್ರ ಸ್ವಾಮಿ ರಥೋತ್ಸವ ಏಪ್ರಿಲ್ 15 ರ ಮಂಗಳವಾರ ಬೆಳಿಗ್ಗೆ 10 ಗಂಟೆಗೆ ವಿಜೃಂಭಣೆಯಿಂದ ನೆರವೇರಲಿದೆ.

# ಶೋಷಿತ ಸಮುದಾಯಗಳ ಪರವಾಗಿ ಹೋರಾಡಿದವರು ಡಾ; ಬಿ.ಆರ್.ಅಂಬೇಡ್ಕರ್

» ದಾವಣಗೆರೆ

ಡಾ; ಬಿ.ಆರ್.ಅಂಬೇಡ್ಕರ್ ಅವರು ಸಮಾಜದಲ್ಲಿ ಸ್ವಾತಂತ್ರ್ಯ, ಸಮಾನತೆ ಪ್ರತಿಪಾದಿಸುವುದರೊಂದಿಗೆ ಶೋಷಿತ ಸಮುದಾಯಗಳ ಪರವಾಗಿ ನಿರಂತರವಾಗಿ ಹೋರಾಡಿದ ಮಹಾನ್ ವ್ಯಕ್ತಿ ಎಂದು ಲೋಕಸಭಾ ಸದಸ್ಯರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಬಣ್ಣಿಸಿದರು.

ಸೋಮವಾರ (ಏ.14) ಮಹಾನಗರಪಾಲಿಕೆ ಆವರಣದಲ್ಲಿರುವ ಶ್ರೀಮತಿ ರಾಧಮ್ಮ ಚನ್ನಗಿರಿ ರಂಗಪ್ಪ ಸ್ಮಾರಕ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ, ಮತ್ತು ಮಹಾನಗರ ಪಾಲಿಕೆ, ದಾವಣಗೆರೆ ಇವರುಗಳ ಸಂಯುಕ್ತಾಶ್ರಯದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಅವರ 134ನೇ ಜಯಂತ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ನಂತರ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು. ಶಿಕ್ಷಣದ ಮೂಲಕ ಸಬಲೀಕರಣ, ಸಾಮಾಜಿಕ ಕಟ್ಟುಪಾಡುಗಳಿಗೆ ಸವಾಲು ಹಾಕುವ ಸಾಧನವಾಗಿ ಶಿಕ್ಷಣಕ್ಕೆ ಒತ್ತು ನೀಡಿದವರು ಡಾ; ಬಿ.ಆರ್.ಅಂಬೇಡ್ಕರ್, ತಳಸಮುದಾಯದಲ್ಲಿ ಆತ್ಮವಿಶ್ವಾಸವನ್ನು ಮೂಡಿಸುವ ಮತ್ತು ಹೊಸ ನಾಯಕರನ್ನು ಸೃಷ್ಟಿಸುವ ಸಾಧನವಾಗಿ ಶಿಕ್ಷಣ ಪ್ರಮುಖ ಪಾತ್ರ ವಹಿಸುತ್ತದೆ. ಈ ನಿಟ್ಟಿನಲ್ಲಿ ಪ್ರತಿ ಪ್ರಜೆಯು ಶಿಕ್ಷಣಕ್ಕೆ ಒತ್ತು ನೀಡಬೇಕು. ಶಿಕ್ಷಣದಿಂದ ಮಾತ್ರ ಏನನ್ನಾದರೂ ಸಾಧಿಸಬಹುದೆಂದು ಜಾಗೃತಿ ಮೂಡಿಸುವ ಜೊತೆಗೆ ಅಸ್ಪೃಶ್ಯತೆ ವಿರುದ್ಧ ಹೋರಾಡಿ ಸಮಸಮಾಜಕ್ಕಾಗಿ ಶ್ರಮಿಸಿದವರು.



ಡಾ; ಅಂಬೇಡ್ಕರ್ ಅವರು ಕಾನೂನುತಜ್ಞ ಮತ್ತು ಅರ್ಥಶಾಸ್ತ್ರದ ಪರಿಣಿತರು. ಹಾಗಾಗಿ ಅವರನ್ನು ಆರ್ಥಿಕ ತಜ್ಞ ಎಂದು ಕರೆಯತ್ತೇವೆ. ಜಾತಿ ಪದ್ಧತಿ ವಿರುದ್ಧ ನಿರಂತರವಾಗಿ ಹೋರಾಡಿದವರು, ಇವರು ಸದಾ ಸಮಾಜದ ಪರಿವರ್ತನೆಗೆ, ಏಳಿಗೆಗೆ, ಶೋಷಿತ ವರ್ಗದವರಿಗೆ ನ್ಯಾಯ ಕೊಡಿಸುವ ಉದ್ದೇಶದಿಂದ ಅನೇಕ ಹೋರಾಟಗಳನ್ನು ಮಾಡುತ್ತಾ ತಮ್ಮ ಜೀವನವನ್ನೇ ಪಣಕ್ಕಿಟ್ಟಂತಹ ಮಹಾನ್ ವ್ಯಕ್ತಿ. ಹಾಗಾಗಿ ಇಂತಹ ಮಹಾನೀಯರ ತತ್ವದರ್ಶಗಳನ್ನು ಮೈಗೂಡಿಸಿಕೊಂಡಾಗ ಮಾತ್ರ ಸಮಸಮಾಜದ ನಿರ್ಮಾಣವಾಗಲಿದೆ. ಇಂದು ಅವರು ರಚಿಸಿದಂತಹ ಸಂವಿಧಾನದಿಂದ ಎಲ್ಲರಿಗೂ ಸಮಾನವಾದ ನ್ಯಾಯ ದೊರಕಲು ಸಾಧ್ಯವಾಗಿದೆ. ಈ ನಿಟ್ಟಿನಲ್ಲಿ ಸಂವಿಧಾನ ಪೀಠಿಕೆಗೆ ಅನುಗುಣವಾಗಿ ನಾವು ಕೆಲಸ ಮಾಡೋಣ, ಅದರಲ್ಲಿರುವ ನೀತಿ ನಿಯಮಗಳನ್ನು ತಪ್ಪದೇ ಪಾಲೊಸೋಣ ಎಂದರು.

ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ ಮಾತನಾಡಿ ಬಡವರು, ದೀನದಲಿತರು ಅಂಬೇಡ್ಕರ್ ಅವರ ಎರಡು ಕಣ್ಣುಗಳಿಂದ್ದಂತೆ, ಮನುಷ್ಯ 2 ರೂಪಾಯಿ ದುಡಿದರೆ 1 ರೂಪಾಯಿ ಆಹಾರಕ್ಕಾಗಿ 1 ರೂಪಾಯಿ ಪುಸ್ತಕಕ್ಕಾಗಿ ಖರ್ಚು ಮಾಡಿ ಎಂದು ಹೇಳಿಕೊಟ್ಟವರು. ಡಾ;ಬಿ.ಆರ್. ಅಂಬೇಡ್ಕರ್ ಸಮಗ್ರ ದೇಶದ ವಿಶ್ವಕೋಶ, ಅವರಲ್ಲಿದ್ದ ಜ್ಞಾನದಿಂದ ದೇಶ, ಸಮಾಜಕ್ಕಾಗಿ ಹೋರಾಟ ಮಾಡಿ ಸಮಸ್ಯೆಗಳನ್ನು ಮಾತ್ರ ಬಿಂಬಿಸದೆ, ಪರಿಹಾರವನ್ನು ಸಹ ಸಂವಿಧಾನದ ಮೂಲಕ ತಿಳಿಸಿದರು.

ಡಾ; ಅಂಬೇಡ್ಕರ್ ಅವರು ಮಹಾನ್ ವ್ಯಕ್ತಿತ್ವ ಹೊಂದುವ ಜೊತೆಗೆ ಚಿಂತಕರಾಗಿದ್ದರು. ಇವರ ವಿಚಾರ, ಆದರ್ಶಗಳನ್ನು ದಿನನಿತ್ಯ ಪಾಲನೆ ಮಾಡಬೇಕು. ಸಂವಿಧಾನವನ್ನು ಅರಿತ ಅಧಿಕಾರಿಗಳು, ಶೋಷಿತ, ದಲಿತ ವರ್ಗದವರಿಗೆ ಸಿಗಬೇಕಾದ ಸೌಲಭ್ಯಗಳನ್ನು ನಿಗದಿತ ಸಮಯದಲ್ಲಿ ದೊರಕಿಸಿ ಅವರ ಸೇವೆಗೆ ಪಾತ್ರರಾದರೆ ತಾವುಗಳು ಸಂವಿಧಾನಕ್ಕೆ ಗೌರವ ಸಲ್ಲಿಸಿದಂತಾಗುತ್ತದೆ ಎಂದರು.

ಸರ್ಕಾರ ತಂದಂತಹ ಭಾಗ್ಯಗಳು, ಗ್ಯಾರಂಟಿ ಯೋಜನೆಗಳು-ಸುಸ್ಥಿರ ಅಭಿವೃದ್ಧಿಯ ಗುರಿಗಳನ್ನು ಒಳಗೊಂಡಿದೆ. ಈ ಯೋಜನೆಗಳು ಮತ್ತು ಅಂಬೇಡ್ಕರ್ ಅವರ ಚಿಂತನೆಗಳು ಹಾಗೂ ಸಂವಿಧಾನದ ಆಶಯಗಳಂತೆ ಅನುಷ್ಠಾನ ಮಾಡಿರುವುದನ್ನು ಮೌಲ್ಯಯುತವಾಗಿ ಗಮನಿಸಬೇಕಾಗಿದೆ. ಹಾಗೂ ಸುಸ್ಥಿರ ಅಭಿವೃದ್ಧಿಯ ಯೋಜನೆಗಳು ಬಾಬಾಸಾಹೇಬ್ ಅಂಬೇಡ್ಕರ್ ಅವರ ದೂರದೃಷ್ಟಿಯ ಚಿಂತನೆಗಳಾಗಿವೆ. ಜೊತೆಗೆ ಪೌರಕಾರ್ಮಿಕರ ಸೇವೆಯನ್ನು ಖಾಯಂಗೊಳಿಸಿದ ಕೀರ್ತಿ ಮುಖ್ಯಮಂತ್ರಿಗಳಿಗೆ ಸಲ್ಲುತ್ತದೆ. ಆದರೆ ಬಡ ಪೌರಕಾರ್ಮಿಕರ ಹುದ್ದೆಯನ್ನು ಖಾಯಂಗೊಳಿಸಲು ಮಧ್ಯವರ್ತಿಗಳು ಹಣದ ಬೇಡಿಕೆಯನ್ನು ಇಡುತ್ತಿದ್ದಾರೆ, ಕೂಡಲೇಅದನ್ನುಪರಿಶೀಲಿಸಿತಡೆಯಬೇಕು ಎಂದು ಮಹಾನಗರ ಪಾಲಿಕೆ ಆಯುಕ್ತರಿಗೆ ಮನವಿ ಮಾಡಿಕೊಂಡರು.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್ ಸಂವಿಧಾನ ಪೀಠಿಕೆ ಓದಿದರು. ಸುರೇಶ್ ಹನಗವಾಡಿ ಮತ್ತು ರವಿಕುಮಾರ್ ಇವರಿಗೆ ಸನ್ಮಾನಿಸಲಾಯಿತು. ಹಾಗೂ ಜಿಲ್ಲೆಯಲ್ಲಿ ವಿವಿಧ ವಿಭಾಗಗಳಲ್ಲಿ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಾದ ಹರ್ಷಿತ, ಗಗನ್, ಅಂಕಿತ್, ರಶ್ಮಿ, ಮಂಜುನಾಥ ಇವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಮೈಸೂರು ಮುಕ್ತ ವಿಶ್ವವಿದ್ಯಾನಿಲಯದ ಪರಿಕ್ಷಾಂಗಕುಲಸಚಿವಡಾ;ಹೆಚ್.ವಿಶ್ವನಾಥ ಉಪನ್ಯಾಸ ನೀಡಿದರು. ರಾಜ್ಯ ತಾಂಡ ಅಭಿವೃದ್ಧಿ ನಿಗಮ ನಿಯಮಿತ ಅಧ್ಯಕ್ಷರಾದ ಜಯದೇವನಾಯ್ಕ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಪಾಲಿಕೆ ಆಯುಕ್ತೆ ರೇಣುಕಾ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ಕೆ.ನಾಗರಾಜ, ಮುಖಂಡರಾದ ಮಲ್ಲೇಶ್, ರವಿನಾರಾಯಣ, ರುದ್ರಮುನಿ, ಮಂಜುನಾಥ, ಗುಡ್ಡಪ್ಪ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಕಾರ್ಯಕ್ರಮಕ್ಕೂ ಮುನ್ನ ಡಾ; ಬಿ.ಆರ್.ಅಂಬೇಡ್ಕರ್ ವೃತ್ತದಿಂದ ವಿವಿಧ ಕಲಾತಂಡಗಳ ಮೆರವಣಿಗೆಯೊಂದಿಗೆ ವಿವಿಧ ರಸ್ತೆಗಳ ಮೂಲಕ ಮೆರವಣಿಗೆ ಸಾಗಿ ಪಾಲಿಕೆ ಆವರಣದಲ್ಲಿ ವೇದಿಕೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಾಯಿತು.

### 25 ವರ್ಷಗಳ ನಂತರ ಸಾಕಾರಗೊಂಡ ಡಾ; ಬಿ.ಆರ್.ಅಂಬೇಡ್ಕರ್ ಭವನ

# ಸುಸಜ್ಜಿತ ಭವನ ನಿರ್ಮಾಣವಾಗಿ ಎಲ್ಲರಿಗೂ ಉಪಯುಕ್ತವಾಗಬೇಕು: ಮಲ್ಲಿಕಾರ್ಜುನ್

» ದಾವಣಗೆರೆ

ಜಿಲ್ಲೆಯಲ್ಲಿ ಅನೇಕ ಕಡೆ ಡಾ; ಬಿ.ಆರ್. ಅಂಬೇಡ್ಕರ್ ಭವನಗಳಿದ್ದರೂ ಜಿಲ್ಲಾ ಮಟ್ಟದಲ್ಲಿ ಭವನ ನಿರ್ಮಾಣ ಮಾಡಲು 25 ವರ್ಷಗಳ ಹಿಂದೆ ಪ್ರಯತ್ನಿಸಿದರೂ ಸಾಕಾರಗೊಂಡಿರಲಿಲ್ಲ. ಇದು ಡಾ;ಬಿ.ಆರ್.ಅಂಬೇಡ್ಕರ್ ಅವರ 134 ನೇ ಜಯಂತಿ ಸಂದರ್ಭದಲ್ಲಿ ಸಾಕಾರಗೊಂಡಿದ್ದು ಸುಸಜ್ಜಿತ ಭವನ ನಿರ್ಮಾಣವಾಗಿ ಎಲ್ಲರಿಗೂ ಇಲ್ಲಿ ಕಾರ್ಯಕ್ರಮ ಮಾಡಲು ಅವಕಾಶಗಳು ಸಿಗುವಂತಾಗಬೇಕೆಂದು ತೋಟಗಾರಿಕೆ, ಗಣಿ ಮತ್ತು ಭೂ ವಿಜ್ಞಾನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಸೋಮವಾರ ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಿರುವ ಸರ್ಕ್ಯೂಟ್‌ಹೌಸ್ ಪಕ್ಕದಲ್ಲಿ ಡಾ; ಬಿ.ಆರ್.ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿ ಸಮಾರಂಭದಲ್ಲಿ ಮಾತನಾಡಿದರು. ಜಿಲ್ಲಾ ಮಟ್ಟದಲ್ಲಿ ಡಾ;ಬಿ.ಆರ್.ಅಂಬೇಡ್ಕರ್ ರವರ ಭವನ ನಿರ್ಮಾಣ ಮಾಡುವುದು ಬಹಳ



ದಿನಗಳ ಬೇಡಿಕೆಯಾಗಿತ್ತು. ಮುಖಂಡರ ಒಮ್ಮತದ ನಿರ್ಣಯದ ಕೊರತೆಯಿಂದ ಭವನ ನಿರ್ಮಾಣ 2000 ಇಸವಿಯಿಂದಲೂ ನೆನೆಗುದಿಗೆ ಬಿದ್ದಿತ್ತು. ಆದರೆ ಈಗ ಇದಕ್ಕೆ ಕಾಲಕೂಡಿಬಂದಿತು. ಸರ್ಕ್ಯೂಟ್‌ಹೌಸ್ ಪಕ್ಕದಲ್ಲಿ ಡಿಸಿಸಿ ಬ್ಯಾಂಕ್‌ಗೆ ಹಂಚಿಕೆಯಾದ 20 ಗುಂಟೆ ಜಾಗವನ್ನು ಡಾ; ಬಿ.ಆರ್.ಅಂಬೇಡ್ಕರ್ ಭವನ ನಿರ್ಮಾಣ ಮಾಡಲು ಸರ್ಕಾರದ ಮಟ್ಟದಲ್ಲಿ ಮಂಜೂರಾತಿ ದೊರಕಿಸಿ, ಈ ಜಾಗಕ್ಕಾಗಿ ಡಿಸಿಸಿ ಬ್ಯಾಂಕ್ ನಿಂದ ಭರಿಸಲಾಗಿದ್ದ 78 ಲಕ್ಷವನ್ನು ವಾಪಸ್ ಮಾಡಿಸುವ ಮೂಲಕ ಡಿಸಿಸಿ ಬ್ಯಾಂಕ್‌ಗೆ ಎಪಿಎಂಸಿ ಆವರಣದಲ್ಲಿ ಸ್ಥಳಾವಕಾಶ ಮಾಡಿಕೊಡಲಾಗಿದೆ ಎಂದರು.

ಸರ್ಕಾರವು ಡಾ; ಬಿ.ಆರ್.ಅಂಬೇಡ್ಕರ್ ಭವನ ನಿರ್ಮಾಣ ಮಾಡಲು ರೂ.5 ಕೋಟಿಗೆ ಮಂಜೂರಾತಿ ನೀಡಿ ರೂ.1.5 ಕೋಟಿ ಅನುದಾನ ಬಿಡುಗಡೆ ಮಾಡಿದೆ. ಆದರೆ ಈ ಅನುದಾನ ಸಾಕಾಗದಿರುವುದರಿಂದ, ಇನ್ನೂ ಹೆಚ್ಚಿನ ಅನುದಾನ ತಂದು ಅತ್ಯಾಧುನಿಕ ಸೌಲಭ್ಯವುಳ್ಳ ಭವನ ನಿರ್ಮಾಣ ಮಾಡುವ ಮೂಲಕ, ಎಲ್ಲರೂ ಇಲ್ಲಿ ಕಾರ್ಯಕ್ರಮ ಮಾಡುವ ನಿಟ್ಟಿನಲ್ಲಿ ಭವನ ನಿರ್ಮಾಣ ಮಾಡಲಾಗುತ್ತದೆ ಎಂದರು.

ಈ ಹಿಂದೆ ಶಾಮನೂರು, ಬೇತೂರಿನಲ್ಲಿ ಡಾ; ಬಿ.ಆರ್.ಅಂಬೇಡ್ಕರ್ ಭವನ ನಿರ್ಮಾಣ ಮಾಡಲಾಗಿದೆ. ಅಲ್ಲಿ ಎಲ್ಲಾ ಸಮುದಾಯದವರು ಮದುವೆ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ನೆರವೇರಿಸುತ್ತಾರೆ. ಈ ನಿಟ್ಟಿನಲ್ಲಿ ಭವನಗಳು ಉಪಯುತ್ತವಾಗಿದೆ. ಆದರೆ ನಗರದಲ್ಲಿನ ಬಾಬು ಜಗಜೀವನ್ ರಾಂ ಭವನ ಉಪಯೋಗಿಸಲು ಸಾಧ್ಯವಾಗದಿರುವುದರಿಂದ ಇಲ್ಲಿ ಸಮಾಜ ಕಲ್ಯಾಣ ಇಲಾಖೆ ಕಚೇರಿಯನ್ನು ಆರಂಭಿಸಬೇಕೆಂದು ತಿಳಿಸಿದರು.

### ಪ್ರಥಮ ಧರ್ಮ ಗ್ರಂಥ 'ಸಂವಿಧಾನ'



**ಹೊಸದುರ್ಗ:** ವಿಶ್ವದಲ್ಲೇ ಇಲ್ಲದೇ ಇರುವ ಸಂವಿಧಾನವನ್ನು ರಚನೆ ಮಾಡಿದರು. ಅಂಬೇಡ್ಕರವರು, ಸಂವಿಧಾನದಲ್ಲಿ ತುಂಬಿರುವ ಶಕ್ತಿ ಅದ್ಭುತವಾದುದು. ಅದಕ್ಕಾಗಿಯೇ ಭಾರತೀಯರ ಪ್ರಥಮ ಧರ್ಮ ಗ್ರಂಥ 'ಸಂವಿಧಾನ' ಅಂತ ಹೇಳುತ್ತೇವೆ ಎಂದು ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ.ತಿಳಿಸಿದರು.ಪಟ್ಟಣದ ಪುರಸಭಾ ಸಭಾಂಗಣದಲ್ಲಿ ಸೋಮವಾರ ಆಯೋಜಿಸಲಾಗಿದ್ದ ಭಾರತ ರತ್ನ ಸಂವಿಧಾನ ಶಿಲ್ಪಿ ಡಾ: ಬಿ.ಆರ್.ಅಂಬೇಡ್ಕರ್ ರವರ 134 ನೇ ಜನ್ಮ ದಿನಾಚರಣೆ ಮತ್ತು ಹಸಿರು ಕ್ರಾಂತಿಯ ಹರಿಕಾರ ಭಾರತದ ಮಾಜಿ ಉಪಪ್ರಧಾನಿ ಡಾ: ಬಾಬು ಜಗಜೀವನರಾಮ್ ರವ್ರ 118 ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಇಬ್ಬರೂ ಮಹಾನೀಯರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ನಂತರ ಮಾತನಾಡಿದರು.ಜನಪ್ರತಿನಿಧಿಯಾದವರು ಸಂವಿಧಾನವನ್ನು ಅಧ್ಯಯನ ಮಾಡಬೇಕು. ಸಂವಿಧಾನದ ಅನುಗುಣವಾಗಿಯೇ ತನ್ನ ಆಡಳಿತ ನಿರ್ವಹಿಸಬೇಕು. ಸಮಾಜಮುಖಿಯಾದ ಕೆಲಸಕಾರ್ಯಗಳಲ್ಲಿ ತನ್ನನ್ನು ತಾನು ತೊಡಗಿಸಿಕೊಳ್ಳಬೇಕು. ಸಂವಿಧಾನವನ್ನು ಕೊಟ್ಟ ಕಾರಣಕ್ಕಾಗಿಯೇ ಇಡೀ ವಿಶ್ವವೇ ಅಂಬೇಡ್ಕರವರನ್ನು ಗೌರವಿಸುತ್ತದೆ ಎಂದರು.ಮಾಜಿ ಪುರಸಭಾ ಅಧ್ಯಕ್ಯಂ.ಶ್ರೀನಿವಾಸ್ ಮಾತನಾಡಿದರು. ಪುರಸಭಾ ಅಧ್ಯಕ್ಷೆ ರಾಜೇಶ್ವರಿಆನಂದ್ ಅಧ್ಯಕ್ಷತೆ ವಹಿಸಿದ್ದರು. ಪರಿಸರ ವಿಭಾಗದ ಬಸವರಾಜ್, ಕಲ್ಪನ, ವ್ಯವಸ್ಥಾಪಕಿ ಸಾವಿತ್ರಮ್ಮ ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

# ಎಸ್‌ಜೆಎಂ ಪಾಲಿಟೆಕ್ನ್‌ನಲ್ಲಿ ಅಂಬೇಡ್ಕರ್ ಜಯಂತಿ ಆಚರಣೆ

» ಚಿತ್ರದುರ್ಗ

ಇಂದಿನ ಪೀಳಿಗೆಗೆ ಹಿಂದಿನ ಸುಧಾರಕರ ಸಾಮಾಜಿಕ ಕಾಳಜಿಯ ಆಶಯಗಳೇನು ಎನ್ನುವುದನ್ನು ತಿಳಿಸಬೇಕಿದೆ. ಕೇವಲ ಅಂಕ ಗಳಿಸುವ ನಿಟ್ಟಿನಲ್ಲಿ ಮಕ್ಕಳನ್ನ ಪ್ರೇರೇಪಿಸಿ ,ಉಳಿದ ವಿಚಾರಗಳನ್ನು ಗೌಣ ಮಾಡಿದಲ್ಲಿ ಅವರಿಗೆ ನಮ್ಮ ಹಿಂದಿನವರು ಸುಭದ್ರ ಸಮಾಜ ಕಟ್ಟಲು ಪಟ್ಟ ಶ್ರಮ ಏನೂ ಎನ್ನುವುದನ್ನು ಅರ್ಥೈಸಿ ಆ ಮಾರ್ಗದಲ್ಲಿ ಸಾಗಲು ನಾವು ಪ್ರೇರಣೆ ನೀಡಬೇಕೆಂದು,ಅಂತಹ ಸಾಲಿನಲ್ಲಿ ಬರುವ ಡಾ. ಬಿ. ಆರ್. ಅಂಬೇಡ್ಕರ್ ಅವರು ಸರ್ವರು ಆದರಿಸಬಹುದಾದ ಸಂವಿಧಾನ ನೀಡಿರುವ ಅವರ ವ್ಯಕ್ತಿತ್ವವನ್ನು ನಾವು ಸ್ಮರಿಸುತ್ತ ಸಾಗಬೇಕಿದೆ ಎಂದು ಶ್ರೀ ಜಗದ್ಗುರು ಮಲ್ಲಿಕಾರ್ಜುನ ಮುರುಘರಾಜೇಂದ್ರ ಪಾಲಿಟೆಕ್ನಿಕ್ ನ ಪ್ರಾಧ್ಯಾಪಕರಾದ ಗಂಗಾಧರ್ ಅವರು ಅಭಿಪ್ರಾಯಪಟ್ಟರು.

ಅವರು ನಗರದ ಶ್ರೀ ಜಗದ್ಗುರು ಮಲ್ಲಿಕಾರ್ಜುನ ಮುರುಘರಾಜೇಂದ್ರ ಪಾಲಿಟೆಕ್ನಿಕ್ ನಲ್ಲಿ ಏರ್ಪಡಿಸಿದ್ದ ಅಂಬೇಡ್ಕರ್ ಅವರ 134ನೇಜಯಂತಿ ಏರ್ಪಡಿಸಿದ್ದ ಸಂದರ್ಭದಲ್ಲಿ ಸಂವಿಧಾನ ಶಿಲ್ಪಿಗೆ ಪುಷ್ಪ ನಮನ ಸಲ್ಲಿಸಿ ನಾವು



ಮಕ್ಕಳನ್ನು ಸಾಂಸ್ಕೃತಿಕವಾಗಿ ಹದಗೊಳಿಸಿ ಅವರಿಗೆ ಬೇರೆ ಬೇರೆ ವಿಚಾರಗಳ ಕಡೆಗೆ ಗಮನ ಹರಿಸಲು ಸಹಕಾರ ನೀಡಿದರೆ ಓದಿನೊಂದಿಗೆ ಹಲವು ವಿಚಾರಗಳ ಮನನ ಮಾಡಿಕೊಳ್ಳಲು ಸಾಧ್ಯವಾಗುತ್ತದೆ .ಈ ನಿಟ್ಟಿನಲ್ಲಿ ನಮ್ಮ ಮಕ್ಕಳಿಗೆ ಅಂಬೇಡ್ಕರ್ ಅವರು ಮಾದರಿಯಾಗಬೇಕೆಂದು ಸಲಹೆ ಮಾಡಿದರು.ಮತ್ತೋರ್ವ ಪ್ರಾಧ್ಯಾಪಕರಾದ ಗೋವಿಂದರಾಜ್ ಅವರು ಅಂಬೇಡ್ಕರ್ ಕೇವಲ ಆರ್ಥಿಕ ತಜ್ಞರಾಗಿರದೆ, ತತ್ವಜ್ಞಾನಿ, ರಾಜಕೀಯ ಮುತ್ಸದ್ದಿ, ನ್ಯಾಯವಾದಿ ,ಪ್ರಗತಿಪರ ಚಿಂತಕ ಹೀಗೆ ವಿಶೇಷ ಗುಣಗಳ ಗಣಿ ಆಗಿದ್ದವರು. ಸಮಾನತೆ ಅನ್ನುವುದು ಕೇವಲ ಒಂದು ಜನಾಂಗಕ್ಕೆ ಅಲ್ಲ, ಯಾರು ಹಿಂದುಳಿದಿದ್ದಾರೆ ಅವರೆಲ್ಲರಿಗೂ ಸಾಮಾಜಿಕ ನ್ಯಾಯ ಸಿಗಬೇಕೆಂದು ಪ್ರತಿಪಾದಿಸಿದವರು ಅಂಬೇಡ್ಕರ್ ರವರಾಗಿದ್ದರು. 12ನೇ ಶತಮಾನದಲ್ಲಿ ಇಂತಹ ಒಂದು ಕ್ರಾಂತಿಯಾಗಿದ್ದು ಅದನ್ನು ಮತ್ತೆ ಪುನರಾವರ್ತನೆ ಅಂದರೆ ಸಂವಿಧಾನದ ರೂಪದಲ್ಲಿ ಕೊಟ್ಟ ಕೀರ್ತಿ ಅಂಬೇಡ್ಕರ್ ಅವರಿಗೆ ಸಲ್ಲುತ್ತದೆ ಎಂದರು.

ಅಂಬೇಡ್ಕರ್ ಅವರು ಚಿಂತನೆಗಳು ಒಂದು ವರ್ಗ, ಜಾತಿ ,ಧರ್ಮಕ್ಕೆ ಸೀಮಿತವಾದದಲ್ಲ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಬದುಕುವ ಎಲ್ಲರಿಗೂ ಅನ್ವಯವಾಗುತ್ತವೆ ಎಂದು ಕಾಲೇಜಿನ ಅಧೀಕ್ಷಕ ಸಿ.ಎನ್. ಮೋಹನ್ ಅಭಿಪ್ರಾಯಪಟ್ಟರು.

ಗ್ರಂಥಪಾಲಕ ವೀರಯ್ಯ .ಎಂ ಮಾತಾಡಿ ಆ ಕಾಲಕ್ಕೆ ಜನರಲ್ಲಿ ಜಾಗೃತಿ ಮೂಡಿಸಲು ಪತ್ರಿಕೆ ಆರಂಭಿಸಿದ ಅಂಬೇಡ್ಕರ್ ಅವರು ,ಜಗತ್ತಿನಲ್ಲಿ ಖಾಸಗಿಯಾಗಿ ಮಾದರಿ ಎನ್ನುವ ಐವತ್ತು ಸಾವಿರದಷ್ಟು ಎಲ್ಲಾ ಭಾಷೆಗಳ ಕೃತಿಗಳನ್ನು ಸೇರಿಸಿ ಗ್ರಂಥಾಲಯವನ್ನೇ ಸ್ಥಾಪಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಇದು ಬಹುದೊಡ್ಡ ಕೆಲಸ ಎಂದು ನೆನಪಿಸಿಕೊಂಡರು.

ಅಂಬೇಡ್ಕರ್ ಅವರು ಶಾಲಾ ,ಕಾಲೇಜುಗಳಲ್ಲಿ ಓದುವಾಗ ಜಾತಿ ಪದ್ಧತಿಯಿಂದ ಆಗುತ್ತಿದ್ದ ನೋವುಗಳನ್ನು ಸಹಿಸಿಕೊಂಡು ಮುಂದೆ ಅವು ಮರುಕಳಿಸದಂತೆ ಬೇರೆಯವರಿಗೆ ಇದರಿಂದ ನೋವಾಗಬಾರದೆಂದು ತೀರ್ಮಾನಿಸಿ ಒಂದು ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರ ಮಾಡಿದ ಕೀರ್ತಿ ಸಂವಿಧಾನ ಶಿಲ್ಪಿಗೆ ಸಲ್ಲುತ್ತದೆ ಎಂದು ಸಿಬ್ಬಂದಿ ಜಿ. ಕೊಟ್ರಪ್ಪ ಅವರು ಅಭಿಪ್ರಾಯಪಟ್ಟರು.

ಲಿಂಗರಾಜು ಟಿ.ಎನ್. ಮಾತನಾಡಿ ಶ್ರೇಣಿಕೃತ ವ್ಯವಸ್ಥೆಯಲ್ಲಿ ಉಚ್ಚ, ನೀಚ ಎಂಬ ತರತಮ ಭಾವನೆಯಿಂದ ನೊಂದು ಬೆಂದವರಿಗಾಗಿ ಬೆಳಕಾಗಿ ಬಂದವರು ಅಂಬೇಡ್ಕರ್ ಅವರು. ಅವರ ಬಗ್ಗೆ ಎಷ್ಟು ಹೇಳಿದರೂ ಕಡಿಮೆಯೇ.ಎಂದು ಅವರ ಕಾರ್ಯಗಳನ್ನು ಸ್ಮರಿಸಿಕೊಂಡರು.

ರುದ್ರಮೂರ್ತಿ ಎಂ.ಜೆ. ಮಾತನಾಡಿ ಯಾವುದೇ ಸಮಾಜ ಸುಧಾರಕರ ಜಯಂತಿ,ಸ್ಮರಣೆ ಇತರ ಕಾರ್ಯಕ್ರಮ ಕೇವಲ ಶಿಷ್ಟಾಚಾರ ರೂಪದಲ್ಲಿರದೆ ಅವನ್ನ ಎಲ್ಲರೂ ಭಾವನಾತ್ಮಕವಾಗಿ ಶ್ರದ್ಧೆ, ನಿಷ್ಠೆಯಿಂದ ಆಚರಿಸಿದಾಗ ಅದಕ್ಕೊಂದು ಅರ್ಥ ಬರುತ್ತದೆ. ಕೇವಲ ಸಾಂಕೇತಿಕ ಆಗಬಾರದು ಎಂದು ಹೇಳಿದರು.

ಈ ಸಂದರ್ಭದಲ್ಲಿ ವಿಭಾಗದ ಮುಖ್ಯಸ್ಥರಾದ ವಿ. ಟಿ .ರವಿ,ಸಿ. ಮಲ್ಲಿಕಾರ್ಜುನ, ಹಾಗೂ ಜಿ.ಎಸ್. ಗುರುನಾಥ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T